ವಿಜಯಪುರ | ಸಂಪುಟ 01 | ಸಂಚಿಕೆ 252 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಗುರುವಾರ, ನವೆಂಬರ್ 30, 2023



“ವಿಜಯಪುರ ಜಿಲ್ಲೆಯ 13 ತಾಲೂಕುಗಳು ಬರಪೀಡಿತವೆಂದು ಘೋಷಿಸಲಾಗಿದೆ. ಬರ ನಿರ್ವಹಣೆಯಲ್ಲಿ ಯಾವುದೇ ನಿರ್ಲಕ್ಷ್ಯ ತೋರದೆ ಸಮಸ್ಯೆ ಬಂದ 24 ಗಂಟೆಯೊಳಗೆ ಕುಡಿವ ನೀರು ಪೂರೈಸಲು ಅಧಿಕಾರಿಗಳು ಸನ್ನದ್ಧರಾಗಿರಬೇಕು.

– ಕೃಷ್ಣ ಭೈರೇಗೌಡ
ಸಚಿವರು, ಕಂದಾಯ ಇಲಾಖೆ

ಉದಯರಶ್ಮಿ ದಿನಪತ್ರಿಕೆ

### ಸಿಎಎ ಗೆ ಮಮತಾ ಬ್ಯಾನರ್ಜಿ ವಿರೋಧ । ಪೌರತ್ವ ತಿದ್ದುಪಡಿ ಕಾಯ್ದೆ ಅಂತಿಮ ಕರಡು 2024ರ ಮಾ.30ರೊಳಗೆ ಸಿದ್ಧ

# ಸಿಎಎ ಜಾರಿ ತಡೆಯಲು ಯಾರಿಂದಲೂ ಸಾಧ್ಯವಿಲ್ಲ

### ಕೋಲ್ಕತ್ತಾದ ರ್ಯಾಲಿಯಲ್ಲಿ ಗೃಹ ಸಚಿವ ಅಮಿತ್ ಶಾ ಸ್ಪಷ್ಟನೆ

ಕೋಲ್ಕತಾ: ಕೇಂದ್ರ ಸರ್ಕಾರವು ಪೌರತ್ವ ತಿದ್ದುಪಡಿ ಕಾಯ್ದೆಯನ್ನು ತರಲಿದೆ ಮತ್ತು ಅದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದು ಗೃಹ ಸಚಿವ ಅಮಿತ್ ಶಾ ಬುಧವಾರ ಹೇಳಿದ್ದಾರೆ.

ಕೋಲ್ಕತ್ತಾದಲ್ಲಿ ಲೋಕಸಭೆಯ ಚುನಾವಣಾ ಪ್ರಚಾರದ ಭಾಗವಾಗಿ ರ್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಅಮಿತ್ ಶಾ, ಸಿಎಎಯನ್ನು ಮಮತಾ ಬ್ಯಾನರ್ಜಿ ವಿರೋಧಿಸುತ್ತಿದ್ದಾರೆ. ಆದರೆ ಯಾರೊಬ್ಬರೂ ಅದರ ಅನುಷ್ಠಾನವನ್ನು ತಡೆಯಲು ಸಾಧ್ಯವಿಲ್ಲ. ಪ್ರತಿಪಕ್ಷಗಳ ಬಲವಾದ ವಿರೋಧದ ಮಧ್ಯೆ ಕೇಂದ್ರವು ಸಿಎಎ ಕುರಿತು ನಿಯಮವನ್ನು ರೂಪಿಸಲಿದೆ ಎಂದು ಹೇಳಿದ್ದಾರೆ.

ಇದಲ್ಲದೆ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿಯ ಮೇಲೆ ತುಷ್ಟೀಕರಣ, ಭ್ರಷ್ಟಾಚಾರ ಮತ್ತು ರಾಜಕೀಯ ಹಿಂಸಾಚಾರ, ಒಳ ನುಸುಳುವಿಕೆ ವಿಚಾರದಲ್ಲಿ ತೀವ್ರ ವಾಗ್ದಾಳಿ ನಡೆಸಿದ್ದು, ಮುಂದಿನ ಚುನಾವಣೆಯಲ್ಲಿ ಬಿಜೆಪಿಯನ್ನು ಗೆಲ್ಲಿಸುವಂತೆ ಸೂಚಿಸಿದ್ದಾರೆ.

ಇಲ್ಲಿ ನೆರೆದಿರುವ ಜನಸ್ತೋಮವನ್ನು ನೋಡಿದರೆ ಇದು ಬಿಜೆಪಿಯ ಪರ ಜನರ ಒಲವನ್ನು ಸೂಚಿಸುತ್ತದೆ. 2026ರಲ್ಲಿ ರಾಜ್ಯದಲ್ಲಿ ಬಿಜೆಪಿ 3ನೇ ಎರಡರಷ್ಟು ಬಹುಮತದೊಂದಿಗೆ ಅಧಿಕಾರಕ್ಕೆ ಬರಲಿದೆ. ರಾಜ್ಯದಲ್ಲಿ ಬಿಜೆಪಿಯ ಸಾಧನೆಯು 2024ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಯ ಗೆಲುವಿಗೆ ಅಡಿಪಾಯವಾಗಿದೆ ಎಂದು ಹೇಳಿದ್ದಾರೆ.

ಇತ್ತೀಚೆಗೆ ಪಶ್ಚಿಮ ಬಂಗಾಳದ ಠಾಕೂರ್ ನಗರದಲ್ಲಿ ದಲಿತ ಮಟುವಾ ಸಮುದಾಯದ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡು ಮಾತನಾಡಿದ ಅಜಯ್ ಮಿಶ್ರಾ, ಪೌರತ್ವದ ಹಕ್ಕುಗಳನ್ನು ಯಾರೂ ಕಸಿದುಕೊಳ್ಳಲು ಸಾಧ್ಯವಿಲ್ಲ. ಪೌರತ್ವ ತಿದ್ದುಪಡಿ ಕಾಯ್ದೆ ಅಥವಾ ಸಿಎಎಯ ಅಂತಿಮ ಕರಡು 2024ರ ಮಾ.30ರೊಳಗೆ ಸಿದ್ಧವಾಗಲಿದೆ ಎಂದು ಹೇಳಿದ್ದರು.



ಬಾಂಗ್ಲಾದೇಶದಲ್ಲಿ ಧಾರ್ಮಿಕ ಕಿರುಕುಳದಿಂದ ಪಲಾಯನ ಮಾಡಿದ ಮಾಟುವಾ ಸಮುದಾಯದ ಜನರು ವಿಭಜನೆಯ ನಂತರ ಪಶ್ಚಿಮ ಬಂಗಾಳವನ್ನು ಪ್ರವೇಶಿಸಿದ್ದಾರೆ. ಮಾಟುವಾಗಳಿಗೆ ಪೌರತ್ವದ ಹಕ್ಕುಗಳನ್ನು ನೀಡುತ್ತೇವೆ ಎಂದು ಹೇಳಿದ್ದರು.

ಕೇಂದ್ರ ಸರಕಾರವು ತರಲು ಉದ್ದೇಶಿಸಿರುವ ಸಿಎಎ ಅಥವಾ ಪೌರತ್ವ ತಿದ್ದುಪಡಿ ಕಾಯ್ದೆಯ ಪ್ರಕಾರ ಡಿಸೆಂಬರ್ 31, 2014ರ ಮೊದಲು ಭಾರತಕ್ಕೆ ಪ್ರವೇಶಿಸಿದ ಅಫ್ಘಾನಿಸ್ತಾನ, ಬಾಂಗ್ಲಾದೇಶ ಮತ್ತು ಪಾಕಿಸ್ತಾನದಿಂದ ಬಂದ ಹಿಂದೂಗಳು, ಸಿಖ್ಖರು, ಬೌದ್ಧರು, ಜೈನರು, ಪಾರ್ಸಿಗಳು ಮತ್ತು ಕ್ರಿಶ್ಚಿಯನ್ನರಿಗೆ ಭಾರತೀಯ ಪೌರತ್ವವನ್ನು ನೀಡುವುದಾಗಿದೆ. ಪ್ರಾಸ್ತವಿತ ಕಾಯ್ದೆಯು ದೇಶದಲ್ಲಿ ಭಾರೀ ಜನ ವಿರೋಧಕ್ಕೆ ಕಾರಣವಾಗಿತ್ತು.

### ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಸ್ಪಷ್ಟನೆ । ಚುನಾವಣಾ ಆಯೋಗದ ಪತ್ರಕ್ಕೆ ಸರಕಾರದಿಂದ ಉತ್ತರ

# ತೆಲಂಗಾಣ ಚುನಾವಣೆ ಜಾಹೀರಾತು ನಿಯಮ ಉಲ್ಲಂಘಿಸಿಲ್ಲ

ಬೆಂಗಳೂರು: ತೆಲಂಗಾಣದಲ್ಲಿ ಚುನಾವಣೆ ನಡೆಯುಲಿರುವ ತೆಲಂಗಾಣದಲ್ಲಿ ದಿನಪತ್ರಿಕೆಗಳಲ್ಲಿ ರಾಜ್ಯ ಸರ್ಕಾರದ ಕೆಲಸಗಳ ಕುರಿತು ರಾಜ್ಯ ಸರ್ಕಾರದ ಜಾಹೀರಾತುಗಳು ಯಾವುದೇ ನಿಯಮಗಳನ್ನು ಉಲ್ಲಂಘಿಸಿಲ್ಲ ಎಂದು ಕರ್ನಾಟಕ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಮಂಗಳವಾರ ಹೇಳಿದ್ದಾರೆ. ಈ ಕುರಿತು ಚುನಾವಣಾ ಆಯೋಗದ ಪತ್ರಕ್ಕೆ ಸರಕಾರ ಉತ್ತರ ನೀಡಲಿದೆ ಎಂದು ಹೇಳಿದ್ದಾರೆ.

ನವೆಂಬರ್ 30 ರಂದು ನಡೆಯಲಿರುವ ವಿಧಾನಸಭೆಯ ಮತದಾನಕ್ಕೆ ಮುನ್ನ ತೆಲಂಗಾಣ ಮಾಧ್ಯಮಗಳಲ್ಲಿ ಜಾಹೀರಾತುಗಳನ್ನು ಪ್ರಕಟಿಸಿರುವ ಕಾಂಗ್ರೆಸ್ ಕರ್ನಾಟಕದಲ್ಲಿ ತನ್ನ ಸರ್ಕಾರದೊಂದಿಗೆ ಪ್ರಜಾಪ್ರತಿನಿಧಿ ಕಾಯ್ದೆ ಮತ್ತು ಮಾದರಿ ನೀತಿ ಸಂಹಿತೆ ಉಲ್ಲಂಘಿಸಿದೆ ಎಂದು ಆರೋಪಿಸಿ ಬಿಜೆಪಿ ಸೋಮವಾರ ಈ ವಿಚಾರದಲ್ಲಿ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿದೆ.

ಅದೇ ದಿನ ಚುನಾವಣಾ ಆಯೋಗವು ತೆಲಂಗಾಣ ಪತ್ರಿಕೆಗಳಲ್ಲಿ ತನ್ನ ಕೆಲಸದ ಬಗ್ಗೆ ಜಾಹೀರಾತುಗಳನ್ನು ಪ್ರಕಟಿಸುವುದನ್ನು ನಿಲ್ಲಿಸುವಂತೆ ಕರ್ನಾಟಕದ ಕಾಂಗ್ರೆಸ್ ಸರ್ಕಾರವನ್ನು ಕೇಳಿದೆ ಮತ್ತು ಮಾದರಿ ನೀತಿ ಸಂಹಿತೆ (ಒಅಅ) ಅಡಿಯಲ್ಲಿ ಕಡ್ಡಾಯವಾಗಿ ಪೂರ್ವಾನುಮತಿ ಪಡೆಯದಿದ್ದಕ್ಕಾಗಿ ವಿವರಣೆ ನೀಡುವಂತೆ ಸೂಚಿಸಿದೆ.



ಡಿಕೆ ಶಿವಕುಮಾರ್ ಸಮರ್ಥನೆ

ಈ ಬಗ್ಗೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಿವಕುಮಾರ್, ಕರ್ನಾಟಕ ಸರ್ಕಾರವು ತನ್ನ ಯಾವುದೇ 'ಖಾತರಿ ಯೋಜನೆ'ಗಳನ್ನು ಜಾರಿಗೆ ತಂದಿಲ್ಲ ಎಂಬ ವಿರೋಧ ಪಕ್ಷಗಳ ಹೇಳಿಕೆಗಳ ನಡುವೆ ಕರ್ನಾಟಕ ಸರ್ಕಾರ ಮಾಡಿದ ಕೆಲಸವನ್ನು ಬಿಂಬಿಸುವ ಗುರಿಯನ್ನು ಮಾತ್ರ ಹೊಂದಿದೆ ಎಂದು ಶಿವಕುಮಾರ್ ಹೇಳಿದರು.

“ನಾವು ಯಾವುದೇ ನಿಯಮಗಳನ್ನು ಉಲ್ಲಂಘನೆ ಮಾಡಿಲ್ಲ, ಕರ್ನಾಟಕ ಸರ್ಕಾರ ಯಾರನ್ನೂ ಮತ ಕೇಳಿಲ್ಲ. ನಾವು ಯಾವ ಉಲ್ಲಂಘನೆ ಮಾಡಿದ್ದೇವೆ?,” ಎಂದು ಅವರು ಚುನಾವಣಾ ಆಯೋಗದ ನಿರ್ದೇಶನಗಳ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದರು.

ಈ ಜಾಹೀರಾತುಗಳು ಕರ್ನಾಟಕ ಸರ್ಕಾರದ ಬಗ್ಗೆ ಪ್ರತಿಪಕ್ಷಗಳ ಹೇಳಿಕೆಗಳಿಗೆ ಉತ್ತರವಾಗಿದ್ದು ಮತಕ್ಕಾಗಿ ಪ್ರಚಾರ ಮಾಡಿಲ್ಲ ಎಂದು ಅವರು ಹೇಳಿದರು. ವಿರೋಧ ಪಕ್ಷಗಳು ಕರ್ನಾಟಕದಲ್ಲಿ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿಲ್ಲ ಎಂದು ಪ್ರಚಾರ ಮಾಡಲು ಪ್ರಯತ್ನಿಸಿದ್ದಾರೆ, ಅದಕ್ಕಾಗಿ ನಾವು ಯೋಜನೆಗಳ ಜಾರಿ ಬಗ್ಗೆ ಜಾಹೀರಾತು ನೀಡಿದ್ದೇವೆ, ನಾವು ಮತಗಳನ್ನು ಕೇಳಿಲ್ಲ ಎಂದರು.

“ಸಾಕಷ್ಟು ಸಂಚಿಕೆಗಳನ್ನು ಒಳಗೊಂಡ ಹಲವಾರು ನಿಯತಕಾಲಿಕೆಗಳು ಅಥವಾ ಪ್ರಕಟಣೆಗಳು ಇರುತ್ತವೆ. ಇತ ಸರ್ಕಾರಗಳು ಸಹ ಸಾಕಷ್ಟು ಈ ರೀತಿತ ಜಾಹೀರಾತುಗಳನ್ನು ನೀಡುತ್ತಾರೆ. ನಾವು ಕರ್ನಾಟಕ ಸರ್ಕಾರದ ಸಾಧನೆ ಬಿಂಬಿಸುತ್ತಿದ್ದೇವೆ, ನಾವು ಕಾಂಗ್ರೆಸ್ ಪಕ್ಷವನ್ನು ಬಿಂಬಿಸುತ್ತಿಲ್ಲ, ನಾವು ಖಂಡಿತವಾಗಿ ಚುನಾವಣಾ ಆಯೋಗಕ್ಕೆ ಉತ್ತರಿಸುತ್ತೇವೆ,” ಎಂದು ಅವರು ಹೇಳಿದರು.

ತೆಲಂಗಾಣದ ಆಡಳಿತಾರೂಢ ಭಾರತ್ ರಾಷ್ಟ್ರ ಸಮಿತಿ (ಬಿಆರ್-ಎಸ್) ಕೂಡ ಈ ವಿಚಾರವಾಗಿ ಚುನಾವಣಾ ಸಮಿತಿಯನ್ನು ಸಂಪರ್ಕಿಸಿತ್ತು. ಕರ್ನಾಟಕ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿರುವ ಸಮಿತಿಯು, ಜಾಹೀರಾತುಗಳನ್ನು ಪ್ರಕಟಿಸಲು ರಾಜ್ಯ ಸರ್ಕಾರವು ಪೂರ್ವಾನುಮತಿ ಪಡೆದಿಲ್ಲ ಮತ್ತು ಅದರ ಕ್ರಮವು ವರ್ಷಗಳ ಹಿಂದೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ನೀಡಲಾದ ಚುನಾವಣಾ ನೀತಿ ಸಂಹಿತೆ ಸೂಚನೆಗಳನ್ನು ಉಲ್ಲಂಘಿಸಿದೆ ಎಂದು ಹೇಳಿದೆ.

ತೆಲಂಗಾಣದಲ್ಲಿ ಅಂತಹ ಯಾವುದೇ ಜಾಹೀರಾತುಗಳನ್ನು ಪ್ರಕಟಿಸುವುದನ್ನು ನಿಲ್ಲಿಸುವಂತೆ ಕರ್ನಾಟಕ ಸರ್ಕಾರಕ್ಕೆ ಸೂಚನೆ ನೀಡಿದ್ದು, ಅಗತ್ಯ ಅನುಮೋದನೆಗಳನ್ನು ಪಡೆಯುವವರೆಗೆ ತಕ್ಷಣವೇ ಜಾರಿಗೆ ಬರಲಿದೆ.

ಎಂಸಿಸಿ ಸೂಚನೆಗಳ ಅಡಿಯಲ್ಲಿ ಉಲ್ಲೇಖಿಸಿದಂತೆ ಕಾರ್ಯವಿಧಾನದ ಉಲ್ಲಂಘನೆಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಭಾರಿ ಕಾರ್ಯದರ್ಶಿ ವಿರುದ್ಧ ಶಿಸ್ತು ಕ್ರಮವನ್ನು ಏಕೆ ತೆಗೆದುಕೊಳ್ಳಬಾರದು ಎಂದು ಆಯೋಗವು ತನ್ನ ಪತ್ರದಲ್ಲಿ ಕೇಳಿದೆ.

## ರಾಜ ನುಡಿ

ಗರ್ಭದಿಂದ ನಮನ ಎಂದರೆ ತಾಯಿಯೂ ತನ್ನ ಜೀವಿಸುವ ಸಮಯ ಬಂದ ಅವಧಿ ಮುಗಿದರೆ ಭೂತಾಯಿ ತನ್ನ ಗರ್ಭದೊಳಗೆ ನಮ್ಮನ್ನು ಕೊಳ್ಳುತ್ತಾಳೆ. ಗರ್ಭದಿಂದ ಗರ್ಭಕ್ಕೆ ಪಯಣಿಸುವ ಪ್ರಯಾಣವೇ ಈ ಬದುಕು.

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 244

*ಆದಿಯಾಧಾರ ನೀನೆ ಅಯ್ಯಾ !*

*ಅಂತರಂಗ ಬಹಿರಂಗ ಆತ್ಮಸಂಗ ಒಂದೆ ಅಯ್ಯಾ !*
*ನಾದಬಿಂದುಕಳಾತೀತ, ಆದಿಯಾಧಾರ ನೀನೆ ಅಯ್ಯಾ !*
*ಆರೂಢದ ಕೂಟದ ಸುಖವ ಕೂಡಲಸಂಗಯ್ಯ ತಾನೆ ಬಲ್ಲ !*

*– ಬಸವಣ್ಣನವರು*

ಬಸವಣ್ಣನವರು ಈ ವಚನದ ಮೂಲಕ ಎರಡು ಅಂಶಗಳನ್ನು ಸ್ಪಷ್ಟೀಕರಿಸಿದ್ದಾರೆ. ಮೊದಲನೇದಾಗಿ ಸುಮಾರು ಐದು ಬಿಲಿಯನ್ ವರ್ಷಗಳ ಹಿಂದೆ ಸಂಭವಿಸಿದ ಮಹಾಸ್ಫೋಟ (Bigbang)ದ ಮೂಲಕ ಈ ಸೃಷ್ಟಿಯ ಉಗಮಕ್ಕೆ ಮೂಲವಾದ ಮಹಾಲಿಂಗ (Primative atom-=ಆದಿಮೂಲ ಪರಮಾಣು)ವು ಈ ಸೃಷ್ಟಿಯ ಪ್ರಕ್ರಿಯೆಯಲ್ಲಿದೆ. ಅದು ಇಲ್ಲಿಯ ಸಕಲ ಚರಾಚರ ವಸ್ತು, ಜೀವಿಗಳ ಅಂತರಂಗದಲ್ಲಿ ಸಂಚಲನಾಶಕ್ತಿಯಾಗಿದೆ(ಪ್ರಾಣಲಿಂಗ ಸ್ವರೂಪದಲ್ಲಿ)ಎಂದಿದ್ದಾರೆ. ಬಹಿರಂಗದಲ್ಲಿ ಮಹಾಲಿಂಗ ಅಂತರಂಗದಲ್ಲಿ ಪ್ರಾಣಲಿಂಗ ಅಸ್ಥಿತ್ವದಲ್ಲಿದೆ. ಇವೆರಡರ ಸಂಬಂಧವನ್ನು ಏರ್ಪಡಿಸುವ ಪ್ರಕ್ರಿಯೇ ಪೂಜೆ/ಧ್ಯಾನ/ಯೋಗ ಇದನ್ನು “ಅಂತರಂಗ ಬಹಿರಂಗ ಆತ್ಮಸಂಗ ಒಂದೆ ಅಯ್ಯಾ! ನಾದಬಿಂದುಕಳಾತೀತ, ಆದಿಯಾಧಾರ ನೀನೆ ಅಯ್ಯಾ ! “ ಎಂದಿದ್ದಾರೆ. ಎರಡನೆಯದಾಗಿ “ಆರೂಢದ ಕೂಟದ ಸುಖವ ಕೂಡಲ ಸಂಗಯ್ಯ ತಾನೆ ಬಲ್ಲ !” ಎನ್ನುವಲ್ಲಿ ಅಂತರಂಗ ಬಹಿರಂಗಗಳ ಸಂಯೋಗದಲ್ಲಿ ನಾನೆಂಬ ಅಹಂಮಿಕೆ ಅಳಿದಿರುತ್ತದೆ. ನನ್ನದೆಲ್ಲವೂ ನಿನ್ನದಾಗಿರುವಾಗ ಅಂಗ ಲಿಂಗ ಸಂಗದ ಸುಖವು ನೀವೇ (ಕೂಡಲ ಸಂಗಮದೇವ) ಬಲ್ಲಿರಿ ಎನ್ನುತ್ತಾ, ಈ ಅನುಭಾವದ ಅರಿವು ಮೂಡುವುದು ಜ್ಞಾನದ ಉತ್ತುಂಗ ಸ್ಥಿತಿ (ಆರೂಢ) ತಲುಪಿದವರಿಗೆ ಮಾತ್ರ ಸಾಧ್ಯವೆಂದಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಡಿ.ಕೆಂಪಣ್ಣ ಮಾಹಿತಿ

# ಭ್ರಷ್ಟಾಚಾರದ ಕುರಿತು ದಾಖಲೆ ಸಹಿತ ದೂರು ಸಲ್ಲಿಕೆ

ಉದಯರಶ್ಮಿ ನ್ಯೂಸ್

ಬೆಂಗಳೂರು: 'ವಿವಿಧ ಇಲಾಖೆಗಳ ಕಾಮಗಾರಿಗಳಲ್ಲಿನ ಭ್ರಷ್ಟಾಚಾರದ ಕುರಿತು ದಾಖಲೆ ಸಹಿತ ದೂರು ಸಲ್ಲಿಸಿದ್ದೇವೆ. ನಮ್ಮ ಬಳಿ ಲಭ್ಯವಿರುವ 600ಕ್ಕೂ ಹೆಚ್ಚು ಪುಟಗಳಷ್ಟು ದಾಖಲೆಗಳನ್ನು ಎಚ್.ಎನ್. ನಾಗಮೋಹನ್ ದಾಸ್ ನೇತೃತ್ವದ ಆಯೋಗಕ್ಕೆ ಹಸ್ತಾಂತರಿಸಿದ್ದೇವೆ' ಎಂದು ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಡಿ.ಕೆಂಪಣ್ಣ ತಿಳಿಸಿದ್ದಾರೆ.



ಬುಧವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಬಿಜೆಪಿ ಸರಕಾರದ ಅವಧಿಯಲ್ಲಿ ವಿವಿಧ ಇಲಾಖೆಗಳ ಕಾಮಗಾರಿಗಳಲ್ಲಿ ಶೇ.40ರಷ್ಟು ಕಮಿಷನ್ ಪಡೆಯಲಾಗುತ್ತಿತ್ತು ಎಂದು ಪ್ರಧಾನಿ ಮೋದಿ ಹಾಗೂ ಅಂದಿನ ಮುಖ್ಯಮಂತ್ರಿಗೆ ದೂರು ಸಲ್ಲಿಸಲಾಗಿತ್ತು. ಆದರೆ ಯಾವುದೇ ಕ್ರಮ ತೆಗೆದುಕೊಂಡಿಲ್ಲ' ಎಂದು ದೂರಿದರು.

ಬಿಜೆಪಿ ಸರಕಾರದಲ್ಲಿ ಶೇ.40ರಷ್ಟು ಕಮಿಷನ್ ಪಡೆದಿದ್ದರ ಬಗ್ಗೆ ತನಿಖೆ ನಡೆಸುವಂತೆ ಈಗ ಕಾಂಗ್ರೆಸ್ ಸರಕಾರವು ನ್ಯಾಯಮೂರ್ತಿ ಎಚ್.ಎನ್.ನಾಗಮೋಹನ್ ದಾಸ್ ನೇತೃತ್ವದ ಆಯೋಗ ರಚಿಸಿದೆ. ಈಗಿನ ಕಾಂಗ್ರೆಸ್ ಸರಕಾರದಲ್ಲಿಯೂ ಭ್ರಷ್ಟಚಾರ ನಡೆಯುತ್ತಿದೆ. ಹಾಗಾಗಿ ಈಗ ನಡೆಯುತ್ತಿರುವ ಭ್ರಷ್ಟಚಾರದ ಬಗ್ಗೆಯೂ ದೂರು ನೀಡಲಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

> “ಭ್ರಷ್ಟಾಚಾರದ ಕುರಿತು ಆನ್ಲೈನ್ ಮತ್ತು ಆಫ್ಲೈನ್ ಮೂಲಕ ದೂರುಗಳು ಬಂದಿವೆ. ಆರೋಪಗಳಲ್ಲಿ ಮೇಲ್ನೋಟಕ್ಕೆ ಸತ್ಯಾಂಶವಿದೆಯೇ ಎಂದು ಪರಿಶೀಲಿಸಲಾಗುವುದು. ಆ ಬಳಿಕ ವಿಚಾರಣೆ ಆರಂಭಿಸಲಾಗುತ್ತದೆ. ದೂರು ಸಲ್ಲಿಸಲು ಬುಧವಾರ ಕೊನೆಯ ದಿನವಾಗಿದೆ'
> – ನ್ಯಾ.ಎಚ್.ಎನ್.ನಾಗಮೋಹನ್ ದಾಸ್, ತನಿಖಾ ಆಯೋಗದ ಮುಖ್ಯಸ್ಥರು

# ಪ್ರಶಿಕ್ಷಣಾರ್ಥಿಗಳಿಗೆ ತಾಳ್ಮೆ-ಸಂಯಮ ಮುಖ್ಯ :ನಂದಿಕೋಲ

ಉದಯರಶ್ಮಿ ನ್ಯೂಸ್

ಸಿಂದಗಿ: ಶಿಕ್ಷಕನಾಗ ಬಯಸುವ ಪ್ರಶಿಕ್ಷಣಾರ್ಥಿಗಳಿಗೆ ತಾಳ್ಮೆ ಹಾಗೂ ಸಂಯಮ ಮುಖ್ಯ, ಭಾರತೀಯ ಸಂಸ್ಕೃತಿಯಲ್ಲಿ ಗುರುವಿಗೆ ಪೂಜ್ಯನೀಯ ಸ್ಥಾನವನ್ನು ನೀಡಿದ್ದಾರೆ. ಅಂತಹ ಸ್ಥಾನದಲ್ಲಿರುವ ನಾವುಗಳು ವಿದ್ಯಾರ್ಥಿಗಳ ಬದುಕಿನಲ್ಲಿ ಜ್ಞಾನ ಎಂಬ ಬೆಳಕನ್ನು ಚೆಲ್ಲಬೇಕು ಎಂದು ಪದ್ಮರಾಜ ಬಿ.ಈಡಿ ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಜೆ.ಸಿ.ನಂದಿಕೋಲ ಅಭಿಮತ ವ್ಯಕ್ತಪಡಿಸಿದರು.

ಪಟ್ಟಣದ ಜೆ.ಹೆಚ್.ಪಟೇಲ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ 2023-24ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ದೀಪದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅಂಗನವಾಡಿಯಿಂದ ಪದವಿಯವರೆಗೆ ಒಂದು ಕಲಿಕೆಯಾದರೆ 2 ವರ್ಷದ ಈ ಬಿ.ಈಡಿ ತರಬೇತಿ ಶಿಕ್ಷಣವು ಭಿನ್ನ ಹಾಗೂ ಸೃಜನಾತ್ಮಕತೆಯಿಂದ ಕೂಡಿರುತ್ತದೆ. ವೃತ್ತಿ ಜೀವನ ಆರಂಭಿಸುವ ಪ್ರಶಿಕ್ಷಣಾರ್ಥಿಗಳು ಸಮಾಜದಲ್ಲಿ ಪ್ರೀತಿ ಮತ್ತು ಚಾ-ರಿತ್ರ್ಯವನ್ನು ಕಾಯ್ದುಕೊಂಡರೆ ಕಾಯಕದ ಮಹತ್ವವನ್ನು ಗುರುತಿಸಿದಂತೆ. ಶಿಕ್ಷಕ ಎಂಬ ವೃತ್ತಿ ಒಂದು ಹುದ್ದೆಯಲ್ಲ



ಸುಂದರ ಸಮಾಜದ ಸೃಷ್ಠಿಕರ್ತನ ಕಾಯಕ ಎಂದರು.

ಈ ವೇಳೆ ಪ್ರಾಚಾರ್ಯ ಬಿ.ಎಮ್.ಹುರಕಡ್ಲಿ ಮಾತನಾಡಿ, ಶಿಕ್ಷಕನು ಓರ್ವ ಮಾರ್ಗದರ್ಶಕ ಆತನ ಕಲಿಕೆ ನಿರಂತರವಾಗಿರುತ್ತದೆ. ಕೋವಿಡ್ ಸಮಯದಲ್ಲಿನ ಆನ್‌ಲೈನ್ ಶಿಕ್ಷಣದಿಂದ ಬಹಳಷ್ಟು ತಾಪತ್ರಯವನ್ನು ಪ್ರಶಿಕ್ಷಾಣಾರ್ಥಿಗಳ ಜತೆಗೆ ಉಪನ್ಯಾಸಕರು ಕೂಡಾ ಅನುಭವಿಸಿದ್ದರು ಅಂತಹ ಕಾಲದಲ್ಲಿ ನಾವೆಲ್ಲ ಬದುಕಿದ್ದೇ ಹೆಚ್ಚು ಎಂದರು.

ಇದೇ ಸಂದರ್ಭದಲ್ಲಿ ಅಂತಿಮ ವರ್ಷದ ಪ್ರಶಿಕ್ಷಣಾರ್ಥಿಗಳಾದ ಯಲ್ಲಾಲಿಂಗ ನಾಗರಾಳ, ಗೀತಾ ಪಟ್ಟಣಶೆಟ್ಟಿ, ಸಹನಾ ತಳಕೇರಿ, ಶಿವು ದ್ಯಾಮಗೊಂಡ, ಗುರುರಾಜ ಮಠ ಅನಿಸಿಕೆಯನ್ನು ಹಂಚಿಕೊಂಡರು.

ಈ ವೇಳೆ ವಿದ್ಯಾರ್ಥಿ ಒಕ್ಕೂಟದ ಕಾರ್ಯಾಧ್ಯಕ್ಷ ಎಸ್.ಬಿ.ಅಂಕಲಗಿ, ಪ್ರಾಚಾರ್ಯ ಬಿ.ಎಮ್.ಹುರಕಡ್ಲಿ, ಪ್ರಶಿಕ್ಷಣಾರ್ಥಿ ಪ್ರತಿನಿಧಿ ಯಲ್ಲಾಲಿಂಗ ನಾಗರಾಳ, ಉಪನ್ಯಾಸಕರಾದ ಎಸ್.ಎಸ್.ಬಿರಾದಾರ, ಸರೋಜಿನಿ ಹಿರೇಮಠ, ಸಿದ್ದಲಿಂಗ ಕಿಣಗಿ, ಪ್ರದೀಪ ಕತ್ತಿ, ಎಸ್.ಹೆಚ್. ಜಹಾಗೀರದಾರ ಸೇರಿದಂತೆ ಕಾಲೇಜಿನ ಬೋಧಕ ಬೋಧಕೇತರ ಸಿಬ್ಬಂದಿ ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

> “ತಾಂತ್ರಿಕತೆ ಎಷ್ಟೇ ಮುಂದುವರೆದರೂ ಶಿಕ್ಷಕರ, ಉಪನ್ಯಾಸಕರ ಮೌಲ್ಯ ಕಡಿಮೆಯಾಗಿಲ್ಲ. ಶಿಕ್ಷಕ ಹಾಗೂ ವಿದ್ಯಾರ್ಥಿಗಳ ನಡುವೆ ಅನಾದಿ ಕಾಲದಿಂದಲೂ ಅಭಿನಾಭಾವ ಸಂಬಂಧದ ಸಂಕೋಲೆಯಿದೆ.”
> – ಜೆ.ಸಿ.ನಂದಿಕೋಲ, ಪ್ರಾಚಾರ್ಯರು

### 24 ಗಂಟೆಯೊಳಗೆ ಸಮಸ್ಯೆ ಇತ್ಯರ್ಥಕ್ಕೆ ಕ್ರಮ ವಹಿಸಿ । ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚನೆ

# ಕುಡಿವ ನೀರು-ಮೇವು ಸಮಸ್ಯೆಯಾಗದಂತೆ ನೋಡಿಕೊಳ್ಳಿ

ಉದಯರಶ್ಮಿ ನ್ಯೂಸ್

ವಿಜಯಪುರ: ರಾಜ್ಯಾದ್ಯಂತ ಬರಗಾಲ ಘೋಷಣೆಯಾಗಿದೆ. ವಿಜಯಪುರ ಜಿಲ್ಲೆಯ 13 ತಾಲೂಕುಗಳನ್ನು ಬರ ಘೋಷಿಸಲಾಗಿದೆ. ಬರ ನಿರ್ವಹಣೆಯಲ್ಲಿ ಯಾವುದೇ ನಿರ್ಲಕ್ಷ್ಯ ತೋರದೆ ಸಮಸ್ಯೆ ಬಂದ 24 ಗಂಟೆಯೊಳಗೆ ಕುಡಿಯುವ ನೀರು ಪೂರೈಸಲು ಸನ್ನದ್ಧವಾಗಿರುವಂತೆ ಅಧಿಕಾರಿಗಳಿಗೆ ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ ಕಟ್ಟುನಿಟ್ಟಿನ ಸೂಚನೆ ನೀಡಿದರು.



ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಕಂದಾಯ ಇಲಾಖೆ ಪ್ರಗತಿ ಪರಿಶೀಲನೆ ನಡೆಸಿದ ಅವರು, ಕುಡಿಯುವ ನೀರು ಮೇವಿಗಾಗಿ ಜಿಲ್ಲಾಧಿಕಾರಿಗಳ ಖಾತೆಯಲ್ಲಿ 46 ಕೋಟಿ ರೂ. ಹಾಗೂ ತಹಶೀಲ್ದಾರ ಖಾತೆಯಲ್ಲಿ 4.5 ಕೊಟಿ ರೂ. ಒದಗಿಸಲಾಗಿದೆ. ಜಿಲ್ಲೆಯ 6 ಕಡೆ ಟ್ಯಾಂಕರ್ ಮತ್ತು ಬಾಡಿಗೆ ಬೊರವೆಲ್‌ಗಳ ಮೂಲಕ ನೀರು ಪೂರೈಸಲಾಗುತ್ತಿದೆ ಎಂದು ಹೇಳಿದರು.

ಸರ್ಕಾರ ತಾಲೂಕಾ ಮಟ್ಟದಲ್ಲಿ ಟಾಸ್ಕ್ ಪೋರ್ಸ್ ಸಮಿತಿ ರಚನೆಗೆ ಆದೇಶ ನೀಡಿದ್ದು, ಪಂಚಾಯತಿ ಮಟ್ಟದಲ್ಲಿ ಪಂಚಾಯತ್ ಅಭಿವೃದ್ದಿ ಅಧಿಕಾರಿಗಳು, ಗ್ರಾಮಾಧಿಕಾರಿ ಹಾಗೂ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ಅಭಿಯಂತರನ್ನೊಳಗೊಂಡ ಅಧಿಕಾರಿಗಳು ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದಾದ ಗ್ರಾಮಗಳ ಮಾಹಿತಿಯನ್ನು ಕಲೆ ಹಾಕಿ, ಸ್ಥಳೀಯ ಶಾಸಕರನ್ನು ವಿಶ್ವಾಸಕ್ಕೆ ತೆಗದುಕೊಂಡು ಸಮಸ್ಯೆ ಉದ್ಭವಿಸಬಹುದಾದ ಗ್ರಾಮಗಳನ್ನು ಮುಂಚಿತವಾಗಿಯೇ ಗುರುತಿಸಿಟ್ಟುಕೊಳ್ಳಬೇಕು. ಖಾಸಗಿ

ಬೊರವೆಲ್‌ಗಳನ್ನು ಬಾಡಿಗೆ ಆಧಾರದ ಮೇಲೆ ಪಡೆಯಲು ಮನವೊಲಿಸಿ, ನಿಗದಿತ ದರ ನಿಗದಿ ಮಾಡಿಟ್ಟುಕೊಂಡು ಸಮಸ್ಯೆ ಬಂದ 24 ಗಂಟೆಯೊಳಗೆ ನೀರು ಒದಗಿಸಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಕುಡಿಯುವ ನೀರಿಗೆ ಸಂಬಧಿಸಿದ ಯಾವುದೇ ಬಿಲ್ಲಗಳನ್ನು ಬಾಕಿ ಉಳಿಸಿಕೊಳ್ಳದೇ 15 ದಿನಗಳಲ್ಲಿ ಸಲ್ಲಿಸಬೇಕು. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮಾಧಿಕಾರಿಗಳು ಹಾಗೂ ಸಹಾಯಕ ಅಭಿಯಂತರರು ಕುಡಿಯುವ ನೀರಿನ ಬಿಲ್ಲಗಳನ್ನು ತಹಶೀಲ್ದಾರಗಳಿಗೆ ಸಲ್ಲಿಸಬೇಕು. ತಹಶೀಲ್ದಾರರು ಪರಿಶೀಲನೆ ನಡೆಸಿ ತಮ್ಮ ಹಂತದಲ್ಲಿಯೇ ಬಿಲ್ ಪಾವತಿಗೆ ಅವಕಾಶ ಕಲ್ಪಿಸಲಾಗಿದ್ದು, ನಿಗದಿತ ಅವಧಿಯೊಳಗೆ ತಹಶೀಲ್ದಾರರು ಕುಡಿಯುವ ನೀರಿನ ಬಿಲ್ ಪಾವತಿಗೆ ಕ್ರಮ ವಹಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ಅಲೆದಾಟ ತಪ್ಪಿಸಿ ಸುಗಮವಾಗಿ ಕಂದಾಯ ಇಲಾಖೆ ದಾಖಲೆಗಳನ್ನು ಒದಗಿಸಿ ಪಾರದರ್ಶಕ ಸೇವೆ ನೀಡುವ ನಿಟ್ಟಿನಲ್ಲಿ ಎಲ್ಲ ದಾಖಲೆಗಳನ್ನು ಡಿಜಟಲೀಕರಣ ಮಾಡುವ ಮೂಲಕ ರಾಜ್ಯದ ಎಲ್ಲ ತಹಶೀಲ್ದಾರ ಕಚೇರಿಗಳನ್ನು ಪೂರ್ಣ ಪ್ರಮಾಣದಲ್ಲಿ ಅಟೋಮೇಷನ್ ವ್ಯವಸ್ಥೆ ಮಾಡಲಾಗುವುದು. ಪಾವತಿಖಾತೆ ಹಾಗೂ ಹಕ್ಕು ಬದಲಾವಣೆ ಹೊರತುಪಡಿಸಿ ಉಳಿದ ಎಲ್ಲ ದಾಖಲೆಗಳ ಕುರಿತಂತೆ ಪಾರದರ್ಶಕ ಒದಗಿಸಲು ರಾಜ್ಯದ ಎಲ್ಲ ತಹಶೀಲ್ದಾರ ಕಚೇರಿಗಳಲ್ಲಿನ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಿ ಪೂರ್ಣ ಪ್ರಮಾಣದಲ್ಲಿ ಆಟೋಮಿಷನ್ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದು ಎಂದು ಅವರು ಹೇಳಿದರು.

ಗ್ರಾಮ ಲೆಕ್ಕಿಗರು ಪೂರ್ಣ ತಂತ್ರಜ್ಞಾನ ಅಳವಡಿಸಿಕೊಂಡು ಸರಾಗವಾಗಿ ಹಾಗೂ ತ್ವರಿತಗತಿಯಲ್ಲಿ ಸಾರ್ವಜನಿಕರಿಗೆ ಸೇವೆ ಒದಗಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಬೇಕು. ತಂತ್ರಜ್ಞಾನ ಅಳವಡಿಕೆಯಿಂದ ಡಿಜಿಟಲೀಕರಣದಿಂದ ಕಂದಾಯ ಇಲಾಖೆ ಒತ್ತಡವು ಸಹ ಕಡಿಮೆಯಾಗಲಿದೆ ಎಂದು ಹೇಳಿದರು.

ಹಲವು ಕಂದಾಯ ಪ್ರಕರಣಗಳು ಬಾಕಿ ಉಳಿದುಕೊಂಡಿವೆ. ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಒಂದು ವರ್ಷಕ್ಕಿಂತ ಹೆಚ್ಚಿನ ಅವಧಿಯ 59800 ಹಾಗೂ ಐದು ವರ್ಷಕ್ಕಿಂತ ಹೆಚ್ಚಿನ ಅವಧಿಯ ಬಾಕಿ ಇದ್ದ 32780 ಪ್ರಕರಣಗಳನ್ನು ಕಳೆದ ನಾಲ್ಕು ತಿಂಗಳಲ್ಲಿ 23 ಸಾವಿರ ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ಬಾಕಿ ಉಳಿದ ಪ್ರಕರಣಗಳನ್ನು 6 ತಿಂಗಳೊಳಗೆ ವಿಲೇವಾರಿ ಮಾಡಲು ತಹಶೀಲ್ದಾರಗಳಿಗೆ ಸೂಚಿಸಲಾಗಿದ್ದು, ಪ್ರತಿ ತಿಂಗಳ ಪ್ರಕರಣಗಳ ಕುರಿತು ಟ್ರ್ಯಾಕಿಂಗ್ ಸಹ ಮಾಡಲಾಗುತ್ತಿದೆ ಎಂದು ಹೇಳಿದರು.

ಸಮಸ್ಯೆಗಳನ್ನು ಹೇಳಿಕೊಳ್ಳುವ ಹಕ್ಕು ಜನರಿಗೆ ಮಾತ್ರ ಇದೆ. ಅಧಿಕಾರಿಗಳು ಸಮಸ್ಯೆಗಳನ್ನು ಪರಿಹರಿಸಬೇಕು. ಸ್ವಯಂ ಪ್ರೇರಣೆಯಿಂದ ಅದಿಕಾರಿಗಳು ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಬೇಕು.

ಜಿಲ್ಲೆಯ ಎಫ್‌ಐಡಿ ಪ್ರಗತಿ ಹೆಚ್ಚಿಸಬೇಕೆಂದ ಸಚಿವರು, ಕೇವಲ ನಂಬರ್‌ಗಳಲ್ಲಿ ಮಾತ್ರ ಪ್ರಗತಿ ಕಾಣದೇ, ಜಿಲ್ಲೆಯಲ್ಲಿ ಇನ್ನೂ 2.40 ಲಕ್ಷ ರೈತರ ನೋಂದಣಿ ಬಾಕಿ ಇದೆ. ಇದರಿಂದ ರೈತರಿಂದ ಹಣ ಪಾವತಿ ಮಾಡುವುದು ಹೇಗೆ ಸಾಧ್ಯವಾಗುತ್ತದೆ ಎಂದರು.

ಬರ ಪರಿಹಾರ ಒದಗಿಸಲು ಕೇಂದ್ರ ಸರ್ಕಾರಕ್ಕೆ ಈಗಾಗಲೇ ವರದಿ ಸಲ್ಲಿಸಲಾಗಿದ್ದು, ಶೀಘ್ರವೇ ತೀರ್ಮಾನವಾಗಬಹುದೆಂಬ ಆಶಾಭಾವನೆ ವ್ಯಕ್ತಪಡಿಸಿದ ಅವರು, ಮುಖ್ಯಮಂತ್ರಿಗಳು ಸಹ ಮುಂದಿನ ವಾರದಲ್ಲಿ ಪ್ರಧಾನಮಂತ್ರಿಗಳನ್ನು ಭೇಟಿ ಮಾಡಿ ಬರ ಪರಿಹಾರ ಬಿಡುಗಡೆ ಮನವಿ ಮಾಡಲಿದ್ದಾರೆ. ಕೇಂದ್ರ ಬರ ಪರಿಹಾರ ಬರುವ ಮೊದಲೇ ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಹಣ ಬಂದ ಮೇಲೆ ಇಟ್ಟುಕೊಳ್ಳಲು ಆಗುವುದಿಲ್ಲ. ರೈತರ ಖಾತೆಗೆ ಜಮೆ ಮಾಡಬೇಕಾಗುತ್ತದೆ. ಜಿಲ್ಲೆಯಲ್ಲಿ ಕೇವಲ ಶೇ.64 ರಷ್ಟು ಫ್ರೂಟ್ಸ್ ತಂತ್ರಾಂಶದಲ್ಲಿ ನೊಂದಣಿಯಾಗಿದ್ದು, ಒಂದು ವಾರದೊಳಗೆ ನಿಗದಿ ಪ್ರಗತಿ ಸಾಧಿಸುವಂತೆ ತಿಳಿಸಿದ ಅವರು, ಫ್ರೂಟ್ಸ್‌ನಲ್ಲಿ ರೈತರು ಕೇವಲ ಐಡಿ ಮಾತ್ರ ಸೃಜನೆ ಮಾಡಿಕೊಂಡಿರುತ್ತಾರೆ. ವಿಸ್ತೀರ್ಣ ನೋಂದಣಿಯಾಗಿರುವುದಿಲ್ಲ. ಇದರಿಂದ ರೈತರಿಗೆ ಪರಿಹಾರ ಹಣ ನೀಡಲು ತೊಂದರೆಯಾಗುವುದರಿಂದ ಫ್ರೂಟ್ಸ್‌ನಲ್ಲಿ ವಿಸ್ತೀರ್ಣ ಸಹ ನೊಂದಾಯಿಸುವುದು ಕಡ್ಡಾಯವಾಗಿದ್ದು, ಕೂಡಲೇ ತಮ್ಮ ಬಳಿ ಲಭ್ಯವಿರುವ ದಾಖಲೆಗಳನುಸಾರ ವಿಸ್ತೀರ್ಣ ದಾಖಲಿಸಲು ಕ್ರಮ ವಹಿಸಬೇಕು. ಹಣ ಪಾವತಿಯಲ್ಲಿ ಪಾರದರ್ಶಕವಾಗಿರಬೇಕು. ಯಾವುದೇ ತಂಟೆ ತಕರಾರಿಲ್ಲದೇ ನೇರವಾಗಿ ರೈತರ ಖಾತೆಗೆ ಫ್ರೂಟ್ಸ್ ಡಾಟಾ ಬೇಡ್ ಮೂಲಕ ಜಮೆ ಮಾಡಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಸಂಸದರಾದ ರಮೇಶ ಜಿಗಜಿಣಗಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ಅಪ್ಪಾಜಿ ಸಿ.ಎಸ್.ನಾಡಗೌಡ, ವಿಠ್ಠಲ ಕಟಕದೊಂಡ ಅಶೋಕ ಮನಗೂಳಿ, ಕಂದಾಯ ಇಲಾಖೆ ಆಯುಕ್ತ ಪಿ.ಸುನೀಲುಮಾರ, ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

## ರೈತರಿಗೆ ಸಚಿವರಿಂದ ಮನವಿ

ಈ ಸಂದರ್ಭದಲ್ಲಿ ಸಚಿವರು ರೈತರಲ್ಲಿ ಮನವಿ ಮಾಡಿಕೊಂಡು, ಮುಂದಿನ ಒಂದು ವಾರದೊಳಗಾಗಿ ಎಲ್ಲ ರೈತರು ಕೃಷಿ, ತೋಟಗಾರಿಕೆ, ಸೇರಿದಂತೆ ಯಾವುದೇ ಇಲಾಖೆಗೆ ಬಂದು ತಮ್ಮ ಜಮೀನಿನ ಮಾಹಿತಿ ದಾಖಲಿಕರಣ ಮಾಡಿಕೊಳ್ಳಬೇಕು. ಜಮೀನಿನ ವಿಸ್ತೀರ್ಣ ದಾಖಲೆ ಮಾಡಿದ್ದಲ್ಲಿ ಪರಿಹಾರ ಬರುವುದಿಲ್ಲ. ಆದ್ದರಿಂದ ರೈತರು ಸಹ ತಮ್ಮ ದಾಖಲೆಗಳನ್ನು ಒದಗಿಸಿ ಫ್ರೂಟ್ ಐಡಿಯಲ್ಲಿ ಅಪಡೇಟ್ ಮಾಡಿಕೊಳ್ಳುಂತೆ ಅವರು ಮನವಿ ಮಾಡಿಕೊಂಡರು.

ಇ-ಆಡಳಿತ: ಕಂದಾಯ ಇಲಾಖೆಯ ಎಲ್ಲ ಕಚೇರಿಗಳು ಇ-ಆಡಳಿತ ನಿರ್ವಹಣೆ ಮಾಡಬೇಕು. ಪ್ರತಿಯೊಂದು ಕಡತಗಳ ಸ್ವಿಕಾರ ಹಾಗೂ ವಿಲೇವಾರಿ ಇ-ಆಡಳಿತ ಮೂಲಕವೇ ನಿರ್ವಹನೆ ಮಾಡಬೇಕು. ಎಲ್ಲ ಕಚೇರಿಗಳು ಇ-ಆಡಳಿತ ವ್ಯವಸ್ಥೆಯನ್ನು ಕಡ್ಡಾಯವಾಗಿ ಅಳವಡಿಸಿಕೊಂಡು ಕಾರ್ಯನಿರ್ವಹಿಸುವಂತೆ ಸೂಚನೆ ನೀಡಿದ ಅವರು, ಇ-ಆಡಳಿತ ವ್ಯವಸ್ಥೆ ಮೂಲಕ ಪಾರದರ್ಶಕತೆಯಿಂದ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತದೆ. ಪ್ರತಿಯೊಬ್ಬರಿಗೂ ತಮ್ಮ ಕಡತಗಳ ಕುರಿತು ಮಾಹಿತಿ ದೊರೆಯುವುದರಿಂದ ಜನರಿಗೆ ಅಧಿಕಾರಿಗಳ ಮೇಲೆ ವಿಶ್ವಾಸ ಮೂಡುವುದರಿಂದ ಕೂಡಲೇ ಇ-ಆಡಳಿತ ವ್ಯವಸ್ಥೆಗೆ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

# ಕನ್ನಡ-ಕರ್ನಾಟಕ ರಾಜ್ಯೋತ್ಸವ ಮಾಸದ ಕೊನೆಯಲ್ಲಿ..




ಉದಯರಶ್ಮಿ ದಿನಪತ್ರಿಕೆ

ತೀರ್ಥಹಳ್ಳಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಸಮ್ಮೇಳನದಲ್ಲಿ ಭಾಗವಹಿಸಿ ಮಾನವೀಯ ಮೌಲ್ಯಗಳ ಬಗ್ಗೆ ಉಪನ್ಯಾಸ ನೀಡಲು ಬೆಂಗಳೂರಿನಿಂದ ಪ್ರಯಾಣಿಸಿ ಈಗ ತೀರ್ಥಹಳ್ಳಿ ಪ್ರಕೃತಿಯ ಸುಂದರ ಮಡಿಲಲ್ಲಿ ಇರುವಾಗ ಮೂಡಿದ ಒಂದಷ್ಟು ಆಲೋಚನೆಗಳು..

ತಾಯಿ ಭಾಷೆಯ ಉಳಿವಿಗಾಗಿ..

ಕನ್ನಡದ ಭಾಷೆಯ ಸೊಗಡನ್ನು ಉಳಿಸಿಕೊಳ್ಳುವ, ಇಲ್ಲಿನ ಮಣ್ಣಿನ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ವರ್ಗಾಯಿಸುವ, ಕನ್ನಡ ಭಾಷೆಯನ್ನು ಮತ್ತಷ್ಟು ವ್ಯಾಪಕವಾಗಿ ಬಳಸುವ ಮತ್ತು ಬೆಳೆಸುವ ದಿಕ್ಕಿನಲ್ಲಿ ವೈಯಕ್ತಿಕವಾಗಿ ನಾವು ಮಾಡಬಹುದಾದ ಕೆಲವು ಕರ್ತವ್ಯಗಳು ನನಗೆ ತಿಳಿದಂತೆ..

1) ಇನ್ನು ಮುಂದೆ ಕನ್ನಡದ ಯಾವುದೇ ಪೋಷಕರಿಗೆ ಹುಟ್ಟುವ ಮಕ್ಕಳಿಗೆ ಪರಂಪರಾನುಗತವಾಗಿ ಬೆಳೆದು ಬಂದ ಕನ್ನಡ ನೆಲಕ್ಕೆ ಹೆಚ್ಚು ಹತ್ತಿರದ ಮುದ್ದಾದ

" ಹೆಸರುಗಳನ್ನು " ಆಯ್ಕೆ ಮಾಡಿಕೊಂಡು ನಾಮಕರಣ ಮಾಡುವುದು. ಅದರಿಂದಾಗಿ ಕನ್ನಡದ ಘಮಲು ಸದಾ ಪಸರಿಸುತ್ತಿರುತ್ತದೆ..

2) ಒಂದು ವೇಳೆ ಅನಿವಾರ್ಯವಾಗಿ ಮತ್ತು ಅವಶ್ಯಕತೆಗಾಗಿ ನಮ್ಮ ಮಕ್ಕಳನ್ನು ಆಂಗ್ಲ ಮಾಧ್ಯಮ ಶಾಲೆಗೆ ಸೇರಿಸಿದ್ದರು ಸಹ ಮನೆಯಲ್ಲಿ ಎಲ್ಲರೂ ಸಂಪೂರ್ಣ ಅಚ್ಚ ಕನ್ನಡದಲ್ಲಿ ಮಾತನಾಡುವುದು. ಏಕೆಂದರೆ ಈಗ ಭಾಷಾ ವಾತಾವರಣ ಬದಲಾಗಿದೆ. ಹೇಗಿದ್ದರು ಆಂಗ್ಲ ಭಾಷೆಯನ್ನು ಎಲ್ಲಾ ಮಕ್ಕಳು ಸಹಜವಾಗಿ ಕಲಿಯುತ್ತಾರೆ. ನಾವು ಕನ್ನಡ ಕಲಿಸಲು ಹೆಚ್ಚು ಶ್ರಮ ಪಡಬೇಕು..

3) ಮಕ್ಕಳು ಅವರು ಇಚ್ಚಿಸುವ ಯಾವುದೇ ಭಾಷೆಯ ಪುಸ್ತಕ ಓದುವ ಸ್ವಾತಂತ್ರ್ಯ ಇರಲಿ. ಆದರೆ ಪೋಷಕರಾದ ನಾವು ಪ್ರೀತಿಯಿಂದ ಅವರ ಮೇಲೆ ಕನಿಷ್ಠ ಒತ್ತಡ ಹೇರಿ ಕನ್ನಡ ಸಾಹಿತ್ಯದ ಪುಸ್ತಕ ಓದಲು ಪ್ರೇರೇಪಿಸಬೇಕು. ಅದರಿಂದ ಕನ್ನಡದ ಮೇಲೆ ಅವರಿಗೆ ಪರೋಕ್ಷ ಅಭಿಮಾನ ಬೆಳೆಯುತ್ತದೆ..

4) ಮಕ್ಕಳಿಗೆ ತಾಯಿ ಎಷ್ಟು ಮುಖ್ಯವೋ ತಾಯಿ ಭಾಷೆ ಸಹ ಅಷ್ಟೇ ಮುಖ್ಯ ಎಂದು ಸಮಯ ಸಿಕ್ಕಾಗಲೆಲ್ಲಾ ಹೇಳುತ್ತಿರಬೇಕು. ತಾಯಿ ಸಮಾನ ನಮ್ಮ ಭಾಷೆ ಎಂದು ಮಕ್ಕಳಿಗೆ ಅರಿವಾದರೆ ಈಗ ತಕ್ಷಣಕ್ಕೆ ಅಲ್ಲದಿದ್ದರು ಮುಂದೆ ಅವರು ದೊಡ್ಡವರಾದ ಮೇಲೆ ಖಂಡಿತ ನಮ್ಮ ಭಾಷೆಯನ್ನು ಸ್ವಲ್ಪವಾದರು ಪ್ರೀತಿಸುತ್ತಾರೆ..

5) ಆಂಗ್ಲ ಭಾಷೆ ಮಾತನಾಡುವುದು ಪ್ರತಿಷ್ಠಿತ ಪ್ರಶ್ನೆಯೇ ಇರಬಹುದು ಆದರೆ ಅದರ ಜ್ಞಾನಾರ್ಜನೆ ಮತ್ತು ಕ್ರಿಯಾತ್ಮಕತೆಯ ಮೂಲ ನಮ್ಮ ತಾಯಿ ಭಾಷೆ ಎಂದು ಅವರಿಗೆ ವಿನಯಪೂರ್ವಕವಾಗಿ ತಿಳಿ ಹೇಳಬೇಕು. ನಮ್ಮೆಲ್ಲ ಕನಸು, ಆಸೆ ಆಕಾಂಕ್ಷೆ, ನೋವು ದುಃಖ ಯೋಚನೆಗಳು ಮೊಳಕೆ ಒಡೆಯುವುದೇ ತಾಯಿ ಭಾಷೆಯ ಉದರದೊಳಗೆ ಎಂದು ಅರ್ಥಮಾಡಿಸಬೇಕು..



6) ತಾಯಿ ಭಾಷೆ ಎಂದು ಹೇಳುವಾಗ ಕನ್ನಡವೇ ಶ್ರೇಷ್ಠ ಎಂಬ ಸಂಕುಚಿತ ಮನೋಭಾವ ಬೆಳೆಸದೆ ಅವರವರ ತಾಯಿ ಭಾಷೆ ಅವರಿಗೆ ಮುಖ್ಯ ಮತ್ತು ಎಲ್ಲಾ ಭಾಷೆಗಳು ಸಮಾನ ಪ್ರಾಮುಖ್ಯತೆ ಹೊಂದಿವೆ ಎಂಬ ವಿಶಾಲ ಮನೋಭಾವ ಬೆಳೆಸಬೇಕು. ಒಂದು ಭಾಷೆಯ ಬೆಳವಣಿಗೆಗೆ ಈ ರೀತಿಯ ವಿಶಾಲ ಮತ್ತು ಸಮಗ್ರ ಚಿಂತನೆಗಳ ಮನಸ್ಥಿತಿ ಬಹಳ ಮುಖ್ಯ. ಇದರಿಂದ ಮಕ್ಕಳಲ್ಲಿ ಉತ್ತಮ ಗುಣಮಟ್ಟದ ವ್ಯಕ್ತಿತ್ವ ರೂಪಗೊಳ್ಳುತ್ತದೆ..

7) ಆಂಗ್ಲ ಭಾಷೆ ಅಥವಾ ಕನ್ನಡ ಹೊರತುಪಡಿಸಿ ಇತರೆ ಯಾವುದೇ ಭಾಷೆ ಸರಿಯಾಗಿ ಓದಲು, ಬರೆಯಲು, ಮಾತನಾಡಲು ಬಾರದ ಅನೇಕ ಜನರು, ಕೇವಲ ಕನ್ನಡ ಮಾತ್ರವೇ ಕಲಿತು ಅದರಿಂದಲೇ ಬಹುದೊಡ್ಡ ಸಾಧನೆ ಮಾಡಿದ ಮಹಾನ್ ಸಾಧಕರುಗಳ ಸಾಧನೆಯನ್ನು ಮಕ್ಕಳಿಗೆ ಹೇಳಬೇಕು. ದೇಶ ವಿದೇಶಗಳಲ್ಲಿ ಅವರು ಪ್ರಖ್ಯಾತರಾದ ರೀತಿಯನ್ನು ತಿಳಿಸಬೇಕು. ಜೊತೆಗೆ ತಾಯಿ ಭಾಷೆಯಲ್ಲಿ ಪ್ರಾಥಮಿಕ ಶಿಕ್ಷಣ ಪಡೆಯುವುದೇ ಅತ್ಯುತ್ತಮ ವಿಧ್ಯಾಭ್ಯಾಸ ಕ್ರಮ ಎಂದು ವಿಶ್ವದ ಪ್ರಖ್ಯಾತ ಭಾಷಾ ಶಾಸ್ತ್ರಜ್ಞರು ಹೇಳಿರುವುದನ್ನು ಮಕ್ಕಳಿಗೆ ಮನವರಿಕೆ ಮಾಡಿಕೊಡಬೇಕು..

8) ತಾಯಿ ಭಾಷೆ ಸಹಜ ಸ್ವಾಭಾವಿಕ ಮತ್ತು ಇತರೆ ಯಾವುದೇ ಭಾಷೆಗಳು ಮಲತಾಯಿ ರೀತಿಯ ಭಾಷೆಗಳು, ಅವು ಎಷ್ಟೇ ಬಲಶಾಲಿ ಅಥವಾ ಜನಪ್ರಿಯವಾದರು ತಾಯಿ ಭಾಷೆಯ ಸಹಜ ಸೊಗಡು ಇರುವುದಿಲ್ಲ ಎಂದು ತಿಳಿ ಹೇಳಬೇಕು. ಅದರಿಂದ ತಾಯಿ ಭಾಷೆಯ ಮಹತ್ವ ಮಕ್ಕಳಿಗೆ ಅರಿವಾಗುತ್ತದೆ..

9) ಕನ್ನಡದ ಸಿನಿಮಾ ಸಾಹಿತ್ಯ ಸಂಗೀತ ಉದ್ಯಮ ವಿಜ್ಞಾನ ರಾಜಕೀಯ ಸಾಮಾಜಿಕ ಯಾವುದೇ ಆಗಿರಲಿ ನಾವು ಯಾವುದೇ ಕಚೇರಿ, ಸಮಾರಂಭ, ಶೀರ್ಷಿಕೆ, ಕಾರ್ಯಕ್ರಮಗಳಲ್ಲಿ ಉದ್ದೇಶಪೂರ್ವಕವಾಗಿ ಕನ್ನಡವನ್ನೇ ಹೆಚ್ಚಾಗಿ ಬಳಸಲು ಪ್ರಯತ್ನಿಸಬೇಕು. ಯಾರೋ ಒಬ್ಬರೋ ಇಬ್ಬರೋ ಅವರಿಗಿರುವ ಸಂವಿಧಾನಾತ್ಮಕ ಹಕ್ಕುಗಳನ್ನು ಉಪಯೋಗಿಸಿಕೊಂಡು ಸ್ವಲ್ಪ ಭಾಷೆಯನ್ನು ನಿರ್ಲಕ್ಷ್ಯ ಮಾಡಿದರೆ ನಾವುಗಳು ಅದನ್ನೇ ನೆಪವಾಗಿ ತೆಗೆದುಕೊಂಡು ಮತ್ತೊಂದು ತಪ್ಪು ಮಾಡಬಾರದು. ನಮ್ಮ ತಾಯಿ ಭಾಷೆಯ ಅಭಿಮಾನ ಅಚಲವಾಗಿರಬೇಕು..

10) ಬಹುಮುಖ್ಯವಾಗಿ ಕನ್ನಡ ಬಾರದ ಬೇರೆ ರಾಜ್ಯಗಳ ಜನರು ಇಲ್ಲಿ ವಾಸಿಸಲು ಬಂದಾಗ ಭಾಷಾ ವಿಷಯದಲ್ಲಿ ಅವರ ಮೇಲೆ ದೌರ್ಜನ್ಯ ಮಾಡಬಾರದು. ಕನ್ನಡ ಕಲಿಯಲು ಒತ್ತಾಯ ಮಾಡಬಾರದು. ಅದು ತೀರಾ ಸಣ್ಣತನವಾಗುತ್ತದೆ. ಅವರ ಆಯ್ಕೆಗೆ ಬಿಡಬೇಕು. ಆದರೆ ಕನ್ನಡ ತಾಯಿ ಭಾಷೆಯ ನಾವುಗಳು ಕನ್ನಡವನ್ನೇ ಮಾತನಾಡಬೇಕು. ಆ ಮೂಲಕ ಪರೋಕ್ಷವಾಗಿ ಅವರ ಮೇಲೆ ಒತ್ತಡ ಹಾಕಬೇಕು. ಕೆಲವು ಪ್ರಖ್ಯಾತರು ಮುಖ್ಯವಾಗಿ ಸಿನಿಮಾ ಟಿವಿ ನಟನಟಿಯರು ಶೋಕಿಗಾಗಿ ಕನ್ನಡ ಕಾರ್ಯಕ್ರಮ ಅಥವಾ ಕನ್ನಡ ವಾಹಿನಿಯಲ್ಲಿ ಆಂಗ್ಲ ಭಾಷೆಯಲ್ಲಿ ಮಾತನಾಡಿದರೆ ಅವರಿಗೆ ಛೀಮಾರಿ ಹಾಕಬೇಕು..

ಹೀಗೆ ಮತ್ತು ಇದಲ್ಲದೆ ಇನ್ನೇನಾದರು ಹೊಸ ರೀತಿಯ ಯೋಚನೆ ಹೊಳೆದರೆ, ನಾವು ಕನ್ನಡದ ಬೆಳವಣಿಗೆಗೆ ನಮ್ಮ ವೈಯಕ್ತಿಕ ಮಟ್ಟದಲ್ಲಿ ಮಾಡಬಹುದಾದ ಅಳಿಲು ಸೇವೆಯನ್ನು ನಿರಂತರವಾಗಿ ಮಾಡಿದರೆ ಕನ್ನಡ ಮತ್ತು ಕನ್ನಡದ ಮಣ್ಣಿನ ಸಂಸ್ಕೃತಿ ಮತ್ತಷ್ಟು ಪ್ರಭಾವಶಾಲಿಯಾಗುತ್ತದೆ..

ಇನ್ನು ಸರ್ಕಾರದ ಮಟ್ಟದಲ್ಲಿ ಕನ್ನಡದ ಅಭಿವೃದ್ಧಿಗೆ ಈಗಾಗಲೇ ಹಲವಾರು ಸಮಿತಿಗಳು ಅತ್ಯಂತ ಉಪಯುಕ್ತ ವರದಿಗಳನ್ನು ನೀಡಿವೆ. ಸರೋಜಿನಿ ಮಹಿಷಿ ವರದಿ ಅದರಲ್ಲಿ ಮುಖ್ಯವಾದುದು. ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ ಹೀಗೆ ಅನೇಕ ಸಂಸ್ಥೆಗಳು ಕನ್ನಡದ ಕೆಲಸ ಮಾಡಲು ಇವೆ. ಆದರೆ ಅವು ಹೆಚ್ಚು ಕ್ರಿಯಾಶೀಲವಾಗದೆ ಎಂದಿನಂತೆ ಜಡ್ಡುಗಟ್ಟಿವೆ. ಆಡಳಿತದ ಎಲ್ಲಾ ಹಂತಗಳಲ್ಲಿ ಕನ್ನಡವನ್ನೇ ಬಳಸಬೇಕಾದ ಅನಿವಾರ್ಯತೆ ನಿರ್ಮಿಸಬೇಕಿದೆ..

ಆದರೆ ಸರ್ಕಾರಕ್ಕೆ ಕೇವಲ ಭಾಷೆ ಮಾತ್ರವಲ್ಲ, ಯಾವುದೇ ವಿಷಯವಾದರೂ ಇಚ್ಛಾಶಕ್ತಿಯ ಕೊರತೆ ಎದ್ದು ಕಾಣುತ್ತದೆ. ಭ್ರಷ್ಟ ವ್ಯವಸ್ಥೆಯ ಪೋಷಣೆಲ್ಲಿಯೇ ಅದಕ್ಕೆ ಹೆಚ್ಚು ಆಸಕ್ತಿ. ಆದ್ದರಿಂದ ಸರ್ಕಾರಕ್ಕಿಂತ ಹೆಚ್ಚಾಗಿ ನಾವುಗಳೇ ಭಾಷೆ ಉಳಿಸುವ ಮತ್ತು ಬೆಳೆಸುವ ಆಸಕ್ತಿ ಮತ್ತು ಜವಾಬ್ದಾರಿ ಹೊರಬೇಕಾಗಿದೆ. ಈ ರಾಜ್ಯೋತ್ಸವದಿಂದ ನಮ್ಮ ಕೈಲಾದ ಮಟ್ಟಿಗೆ ಕನ್ನಡದ ಮಣ್ಣಿನ ಸೊಗಡನ್ನು ಉಳಿಸಲು ಮತ್ತಷ್ಟು ಪ್ರಯತ್ನಿಸೋಣ..

### ಕನ್ನಡ ಎನೆ ಕುಣಿದಾಡುವುದೆನ್ನದೆ, ಕನ್ನಡ ಎನೆ ಕಿವಿ ನಿಮಿರುವುದು

ಭಾರತದ ಎಲ್ಲಾ ರಾಜ್ಯಗಳಲ್ಲಿ ಕರ್ನಾಟಕದ ಹೆಚ್ಚುಗಾರಿಕೆ ಮತ್ತು ಕಳಪೆ ಸಾಧನೆ ಏನಿರಬಹುದು. ಒಂದು ನೋಟ..

ಸ್ವಲ್ಪ ಕನ್ನಡ ನಾಡಿನ ಪಕ್ಷಪಾತಿ ಎನಿಸಬಹುದು. ಆದರೂ ಒಂದು ಅನಿಸಿಕೆ - ಅಭಿಪ್ರಾಯ..

1) ನಡವಳಿಕೆ..

ಬಹುತೇಕ ಎಲ್ಲಾ ರಾಜ್ಯಗಳನ್ನು ಒಂದಷ್ಟು ಸುತ್ತಿದ್ದೇನೆ. ಕರ್ನಾಟಕದ ಜನರ ನಡವಳಿಕೆ ವರ್ತನೆ ಇತರ ರಾಜ್ಯಗಳಿಗೆ ಹೋಲಿಸಿದರೆ ಸ್ವಲ್ಪ ಮೃದು ಮತ್ತು ಸೌಮ್ಯವಾಗಿದೆ. ಒರಟುತನ ಕಾಣುವುದಿಲ್ಲ. ಇರುವುದರಲ್ಲಿ ಉತ್ತಮ ಎಂದು ಹೇಳಬಹುದು. ಹಾಗೆಂದು ಸರ್ವಶ್ರೇಷ್ಠ ಎಂದು ಭಾವಿಸಬೇಕಿಲ್ಲ. ಈ ವಿಷಯದಲ್ಲಿ ಬೇರೆಯವರಿಗಿಂತ ಒಂದು ಅಂಕ ಹೆಚ್ಚು.

ಕರ್ನಾಟಕದಲ್ಲಿ ಆರಾಮವಾಗಿ ವಾಸಿಸಬಹುದು.

2) ಆಹಾರ..

ಉತ್ತರ ಭಾರತದ ಮುಖ್ಯ ಆಹಾರ ಗೋಧಿ, ದಕ್ಷಿಣದ ಇತರ ರಾಜ್ಯಗಳ ಅಕ್ಕಿ ಗೋದಿ ಮುಂತಾದ ಸಾಮಾನ್ಯ ಆಹಾರ ಪದಾರ್ಥಗಳನ್ನು ಗಮನಿಸಿದಾಗ ಕರ್ನಾಟಕದಲ್ಲಿ ಗೋಧಿ ಅಕ್ಕಿ ರಾಗಿ ವಿವಿಧ ರೀತಿಯ ಜೋಳಗಳು, ಸಿರಿ ದಾನ್ಯಗಳು, ತರಕಾರಿ ಹಣ್ಣುಗಳು, ಬೇಳೆಕಾಳುಗಳು, ಅಡಿಕೆ, ತೆಂಗು, ಕಬ್ಬು ಎಲ್ಲವನ್ನೂ ಬೆಳೆಯಲಾಗುತ್ತದೆ ಮತ್ತು ಬಳಸಲಾಗುತ್ತದೆ. ದಕ್ಷಿಣ ಕರ್ನಾಟಕದ ರಾಗಿಯ ಮುದ್ದೆ ಊಟ, ಉತ್ತರ ಕರ್ನಾಟಕದ ಜೋಳ ಆಧಾರಿತ ರೊಟ್ಟಿ, ದಕ್ಷಿಣ ಕನ್ನಡ ಕರಾವಳಿ ಭಾಗದ ಮೀನು ಕಡುಬು ಕೇಂದ್ರಿತ ಪದಾರ್ಥಗಳು, ಕೊಡಗಿನ ವಿಶಿಷ್ಟ ಶೈಲಿಯ ಮಾಂಸಾಹಾರ ಎಲ್ಲವೂ ಸ್ವಲ್ಪ ಹೆಚ್ಚು ವಿಭಿನ್ನತೆ ಹೊಂದಿದೆ. ಗುಜರಾತ್, ಮಹಾರಾಷ್ಟ್ರ ಕೇರಳದ ಆಹಾರವೂ ವೈವಿಧ್ಯಮಯವಾಗಿದೆ. ಇಲ್ಲಿಯೂ ಕರ್ನಾಟಕಕ್ಕೆ ಒಂದು ಅಂಕ ಹೆಚ್ಚು ನೀಡಬಹುದು.

3) ಉಡುಗೆ ತೊಡುಗೆ..

ಇದರಲ್ಲಿ ಅಷ್ಟೊಂದು ಉತ್ತಮ ಅಂಕ ಇಲ್ಲ. ಕೇರಳ, ಪಂಜಾಬ್, ರಾಜಸ್ಥಾನ ಪೂರ್ವದ ರಾಜ್ಯಗಳು ಹೆಚ್ಚು ಸುಂದರ ಮತ್ತು ಆಕರ್ಷಕ ವೇಷಭೂಷಣಗಳನ್ನು ಹೊಂದಿವೆ. ಕರ್ನಾಟಕ ಸಾಧಾರಣ ಅಂಕಗಳಿಸುತ್ತದೆ.

4) ರಾಜಕೀಯ..

ಮೊದಲು ತುಂಬಾ ಸಭ್ಯ ಮತ್ತು ಒಳ್ಳೆಯ ಮೌಲ್ಯಯುತ ರಾಜಕೀಯಕ್ಕೆ ಹೆಸರಾಗಿದ್ದ ಕರ್ನಾಟಕ ಕಳೆದ ಎರಡು ದಶಕಗಳಲ್ಲಿ ಆ ಸ್ಥಾನ ಹೊಂದಿಲ್ಲ. ಇತ್ತೀಚೆಗೆ ತೀರಾ ಅಧೋಗತಿಗೆ ಇಳಿದಿದೆ. ಇಲ್ಲಿ ತೃತೀಯ ದರ್ಜೆ ನೀಡಬಹುದು.

5) ಸಾಹಿತ್ಯ ಸಂಗೀತ ಸಿನೆಮಾ ನಾಟಕ ಕಲೆ..

ಇದರಲ್ಲಿ ಖಂಡಿತವಾಗಿ ಕೇರಳ ಆಂದ್ರಪ್ರದೇಶ ಮಹಾರಾಷ್ಟ್ರ ಪಶ್ಚಿಮ ಬಂಗಾಳಗಳ ಜೊತೆ ಮೊದಲ ಸ್ಥಾನಕ್ಕೆ ನಿಕಟ ಸ್ಪರ್ಧೆ ನೀಡುವ ಉತ್ತಮ ಗುಣಮಟ್ಟ ಕರ್ನಾಟಕ ಹೊಂದಿದೆ. ಸಾಹಿತ್ಯದಲ್ಲಿ ಒಂದು ಕೈ ಮೇಲಿದೆ.

6) ಕ್ರೀಡೆ..

ಇಲ್ಲ, ಉತ್ತರ ಭಾರತ, ಕೇರಳ, ತಮಿಳುನಾಡಿಗೆ ಹೋಲಿಸಿದರೆ ಕರ್ನಾಟಕದ ಸಾಧನೆ ದ್ವಿತೀಯ ದರ್ಜೆಗೆ ಮಾತ್ರ ಸೀಮಿತ.

7) ಕಾನೂನು ಮತ್ತು ಸುವ್ಯವಸ್ಥೆ.

ಹೌದು, ಇದರಲ್ಲಿ ಖಂಡಿತ ಉತ್ತಮ ಸ್ಥಾನದಲ್ಲಿ ನಾವು ನಿಲ್ಲುತ್ತೇವೆ. ಮಹಿಳಾ ಸ್ವಾತಂತ್ರ್ಯ, ಕೋಮು ಗಲಭೆಗಳು, ಗುಂಪು ಘರ್ಷಣೆಗಳು, ಭಯೋತ್ಪಾದನೆ, ನಕ್ಸಲಿಸಂ ಇವುಗಳಲ್ಲಿ ಇತರ ರಾಜ್ಯಗಳಿಗಿಂತ ಕರ್ನಾಟಕ ಪರವಾಗಿಲ್ಲ.

ಜನ ತೀರಾ ಅತಿರೇಕದ ಹಿಂಸೆಗೆ ಇಳಿಯುವುದಿಲ್ಲ.

8) ವ್ಯಾಪಾರ ವಾಣಿಜ್ಯ..

ಇಲ್ಲ, ಮಹಾರಾಷ್ಟ್ರ, ಗುಜರಾತ್, ತಮಿಳುನಾಡು ಈ ವಿಷಯದಲ್ಲಿ ತುಂಬಾ ಮುಂದಿವೆ. ನಾವು ಇದರಲ್ಲಿ ಇನ್ನಷ್ಟು ಅಭಿವೃದ್ಧಿ ಹೊಂದುವ ಅವಶ್ಯಕತೆ ಇದೆ.

9)ಮಾಹಿತಿ ತಂತ್ರಜ್ಞಾನ..

ಬಾರತವಷ್ಟೇ ಏಕೆ ವಿಶ್ವದಲ್ಲೇ ಕರ್ನಾಟಕದ ಸ್ಥಾನ ಅತ್ಯುತ್ತಮ ಮಟ್ಟದಲ್ಲಿದೆ. ಹೊರ ದೇಶಗಳಲ್ಲಿ ಕರ್ನಾಟಕದ ರಾಜಧಾನಿ ಬೆಂಗಳೂರು ಮಾಹಿತಿ ತಂತ್ರಜ್ಞಾನದ ತವರು ಎಂದೇ ಗುರುತಿಸಲಾಗುತ್ತದೆ.

10) ಶಿಕ್ಷಣ ಪ್ರವಾಸೋದ್ಯಮ..

ಇಲ್ಲ, ಆಂದ್ರಪ್ರದೇಶ, ಕೇರಳ, ಕಾಶ್ಮೀರ ಹಿಮಾಚಲ ಪ್ರದೇಶ ಮುಂತಾದ ರಾಜ್ಯಗಳಿಗೆ ಹೋಲಿಸಿದರೆ ಸಾಕಷ್ಟು ಸುಧಾರಣೆಯ ಅವಶ್ಯಕತೆ ಇದೆ.

11) ಭಾಷಾಭಿಮಾನ..

ಬಹುಶಃ ದೇಶದಲ್ಲೇ ಅತ್ಯಂತ ಕಡಿಮೆ ಭಾಷಾಭಿಮಾನ ಹೊಂದಿದ ರಾಜ್ಯ ಕರ್ನಾಟಕವೇ ಇರಬಹುದು. ಅದಕ್ಕಾಗಿಯೇ ಇಲ್ಲಿ ಸದಾ ಭಾಷಾ ಹೋರಾಟದ ಚಳವಳಿಗಳು ಜೀವಂತವಿದೆ.

ಹೀಗೆ ಕೆಲವು ಕ್ಷೇತ್ರಗಳಲ್ಲಿ ಕರುನಾಡಿನ ಸಾಧನೆಯ ಏರಿಳಿತಗಳಿವೆ. ಇದು ಅಂಕಿ ಅಂಶಗಳನ್ನು ಆಧಾರಿಸಿಲ್ಲ. ಅನುಭವ ಮತ್ತು ಗ್ರಹಿಕೆಯ ಆಧಾರದ ಮೇಲೆ ಒಂದು ಕಣ್ನೋಟವಷ್ಟೆ.

ತಪ್ಪುಗಳನ್ನು ಸರಿಪಡಿಸಿಕೊಂಡು ಕರ್ನಾಟಕ ದೇಶದಲ್ಲಿ ಅತ್ಯುತ್ತಮ ಆದರ್ಶ ರಾಜ್ಯ ಎಂದು ಹೆಸರಾಗಲಿ ಎಂಬ ಕನಸಿನ ಅರಮನೆಯಲ್ಲಿ..

# ಪೌಷ್ಠಿಕ ಆಹಾರದಿಂದ ದೇಹ ಸದೃಡ :ಕೋರವಾರ

ಉದಯರಶ್ಮಿ ನ್ಯೂಸ್

ಸಿಂದಗಿ: ಇಂದಿನ ಮಕ್ಕಳೇ ನಾಳಿನ ಪ್ರಜೆಗಳು. ಮಕ್ಕಳು ಸರ್ವತೋಮುಖ ಬೆಳವಣಿಗೆ ಹೊಂದಬೇಕಾದರೆ ಕಡ್ಡಾಯವಾಗಿ ಶಿಕ್ಷಣ ಪಡೆಯಬೇಕು ಎಂದು ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎಸ್.ಎನ್. ಕೋರವಾರ ಹೇಳಿದರು.



ಪಟ್ಟಣದ ಜೇವರಗಿ ರಸ್ತೆಯಲ್ಲಿರುವ ಲೋಯಲ್ ಶಾಲೆಯಲ್ಲಿ ಸಂಗಮ ಸಮಗ್ರ ಗ್ರಾಮೀಣ ಅಭಿವೃದ್ಧಿ ಕೇಂದ್ರ ವತಿಯಿಂದ ಹಮ್ಮಿಕೊಂಡ ಚಿಣ್ಣರ ಮೇಳ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳ ದೇಹ ಸದೃಡವಾಗಿರಬೇಕಾದರೆ ಅವರು ಪೌಷ್ಠಿಕ ಆಹಾರ ಪಡೆಯಬೇಕು. ಅಜ್ಜ ಅಜ್ಜಿ ಹೇಳುವ ಕಥೆ–'ಗಳನ್ನು ಕೇಳಬೇಕು. ಮಗುವಿಗೆ 6ತಿಂಗಳಿಂದ 3ವರ್ಷದವರೆಗೆ ಸಮಯಕ್ಕನುಸಾರವಾಗಿ ಚುಚ್ಚುಮದ್ದು ಲಸಿಕೆಯನ್ನು ಹಾಕಿಸಬೇಕು. ಅದ–ರಿಂದ ಮಗುವಿನ ಬೆಳವಣಿಗೆಗೆ ಸಹಾಯವಾಗುತ್ತದೆ ಎಂದರು.

ಈ ವೇಳೆ ಸಂಗಮ ಸಂಸ್ಥೆಯ ನಿರ್ದೇಶಕ ಫಾದರ್ ಸಂತೋಷ ಪ್ರಾಸ್ತವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆ ನೀರಿಕ್ಷಕ ವಿಶ್ವನಾಥ ಕೊರವಾರ, ಮಲಕಪ್ಪ ಹಲಗಿ, ರಾಜೀವ ಕುರಿಮನಿ, ವಿಜಯ ಭಂಟನೂರ ಸೇರಿದಂತೆ ತಾಲೂಕಿನ ವಿವಿಧ ಗ್ರಾಮದ ಸರಕಾರಿ ಶಾಲೆಯ ಮಕ್ಕಳು, ಸಂಸ್ಥೆಯ ಸಿಬ್ಬಂದಿ ಹಾಗೂ ಶಾಲೆಯ ಶಿಕ್ಷಕರು, ಸಿಬ್ಬಂದಿಗಳು ಇದ್ದರು.

# ಡಾ.ಕುಶಾಕ ದಾಸ್ ರಾಜ್ಯ ಪ್ರಶಸ್ತಿಗೆ ಆಯ್ಕೆ

ಉದಯರಶ್ಮಿ ನ್ಯೂಸ್

ವಿಜಯಪುರ: ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ಪಾಟೀಲ ವೈದ್ಯಕೀಯ ಕಾಲೇಜಿನ ಫಿಜಿಯಾಲಜಿ ವಿಭಾಗದ ಡಿಸ್ಟಿಂಗ್ವಿಷ್ಡ್ ಚೇರ್ ಪ್ರೊಫೆಸರ್ ಡಾ. ಕುಶಾಕ ಕೆ. ದಾಸ್ ಅವರಿಗೆ ರಾಜ್ಯ ಸರಕಾರ ವಿಕಲಚೇತನರ ಕ್ಷೇತ್ರದಲ್ಲಿನ ಸೇವೆಗಾಗಿ ರಾಜ್ಯ ಮಟ್ಟದ ವೈಯಕ್ತಿಕ ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಿದೆ.



ಡಿಸೆಂಬರ್ 3 ರಂದು ವಿಶ್ವ ವಿಕಲಚೇತನರ ದಿನದಂದು ಬೆಂಗಳೂ–ರಿನ ಕಂಠೀರವ ಕ್ರೀಡಾಂಗಣದಲ್ಲಿ ಬೆಳಿಗ್ಗೆ 9 ಗಂಟೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಎಸ್. ಸಿದ್ಧರಾಮಯ್ಯ ಅವರು ಪ್ರಶಸ್ತಿ ಪ್ರಧಾನ ಮಾಡಲಿದ್ದಾರೆ.

ನಾನಾ ಕ್ಷೇತ್ರಗಳಲ್ಲಿ ವಿಶಿಷ್ಠವಾದ ಸೇವೆ ಸಲ್ಲಿಸಿದ ವಿಕಲಚೇತನ ವ್ಯಕ್ತಿ/ವಿಕಲಚೇತನರ ಕ್ಷೇತ್ರದಲ್ಲಿ ವಿಶಿಷ್ಠ ಸೇವೆಯನ್ನು ಸಲ್ಲಿಸುತ್ತಿರುವುದನ್ನು ಗುರುತಿಸಿ ವೈಯಕ್ತಿಕ ವಿಭಾಗದಡಿ ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಈ ಪ್ರಶಸ್ತಿ ಪ್ರಧಾನ ಮಾಡಲಾಗುವುದು.

ಡಾ. ಕುಶಾಲ್ ಕೆ. ದಾಸ್ ಅವರು ಪ್ರಶಸ್ತಿಗೆ ಆಯ್ಕೆಯಾಗಿರುವುದಕ್ಕೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ. ಬಿ. ಪಾಟೀಲ ಅಭಿನಂದನೆ ಸಲ್ಲಿಸಿದ್ದಾರೆ.

# ಪುರದಾಳದಲ್ಲಿ ಸಾಹಿತಿತ್ರಯರಿಗೆ ಸನ್ಮಾನ

ಉದಯರಶ್ಮಿ ನ್ಯೂಸ್

ಸಿಂದಗಿ: ತಾಲೂಕಿನ ಪುರದಾಳ ಗ್ರಾಮದಲ್ಲಿ ಸದ್ಗುರು ಯಮನೂರೇಶ ಶರಣ–ರ ಸ್ಥಾಪಿತ ಬ್ರಹ್ಮಜ್ಞಾನಿ ಶ್ರೀ ಭೀಮಾಶಂಕರ ಮಹಾರಾಜರ 39ನೆಯ ಜಾತ್ರಾ ಮಹೋತ್ಸವ, ತತ್ವಪದ ಸಂಭ್ರಮ, ಧರ್ಮಸಭೆ, ಅನುಭಾವ ಕವಿಗೋಷ್ಠಿ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಸಾಹಿತಿಗಳಾದ ಮೌಲಾಲಿ ಆಲಗೂರ, ಧರು ಕಕ್ಕಳಮೇಲಿ, ಮಲ್ಲಿಕಾರ್ಜುನ ಧರಿ ಅವರಿಗೆ ಸಾಹಿತ್ಯ ಮತ್ತು ಸಾಮಾಜಿಕ ಸೇವೆಯನ್ನು ಗುರುತಿಸಿ ಸನ್ಮಾನಿಸಿ ಗೌರವಿಸಲಾಯಿತು.



ಇದೇ ವೇಳೆ ವೇದಿಕೆಯ ಮೇಲೆ ಜಾನಪದ ವಿದ್ವಾಂಸಕ ಡಾ.ಎಂ.ಎಂ ಪಡಶೆಟ್ಟಿ, ಸಾಹಿತಿ ಮಲ್ಲಿಕಾರ್ಜುನ ಕಡಕೋಳ, ಸಾಹೇಬಗೌಡ ಬಿರಾದಾರ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸದಾಶಿವ ಆಯೋಗದ ವರದಿ ಮಂಡನೆಗೆ ಡಿಎಸ್ಎಸ್ ಆಗ್ರಹ

ಉದಯರಶ್ಮಿ ನ್ಯೂಸ್

ಬೆಂಗಳೂರು: ಮುಂದಿನ ತಿಂಗಳು ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲದ ಅಧಿವೇಶನದಲ್ಲಿ ನಿವೃತ್ತ ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗದ ವರದಿ ಮಂಡನೆ ಮಾಡಲು ರಾಜ್ಯ ಸರಕಾರ ಮುಂದಾಗಬೇಕೆಂದು ಆಗ್ರಹಿಸಿ ದಲಿತ ಸಂಘರ್ಷ ಸಮಿತಿ ಸದಸ್ಯರು ಬೃಹತ್ ಚಳವಳಿ ನಡೆಸಿದರು.




ಬುಧವಾರ ನಗರದ ಫ್ರೀಡಂ ಪಾರ್ಕಿನ ಮೈದಾನದಲ್ಲಿ ಜಮಾಯಿಸಿದ ದಲಿತ ಸಂಘರ್ಷ ಸಮಿತಿ ಸದಸ್ಯರು, ರಾಜ್ಯ ಸರಕಾರ ಈ ಬಾರಿಯ ಅಧಿವೇಶನದಲ್ಲಿ ಎ.ಜೆ.ಸದಾಶಿವ ಆಯೋಗದ ವರದಿ ಮಂಡಿಸಿ ದಲಿತ ಸಮುದಾಯಕ್ಕೆ ನ್ಯಾಯ ಒದಗಿಸಬೇಕು ಎಂದು ಘೋಷಣೆ ಕೂಗಿ ಆಗ್ರಹಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ದಸಂಸ ಸಂಸ್ಥಾಪಕ ಎನ್.ಮೂರ್ತಿ, ಎ.ಜೆ. ಸದಾಶಿವ ಆಯೋಗದ ವರದಿಯನ್ನು ಉಭಯ ಸದನಗಳಲ್ಲಿ ಅಂಗೀಕರಿಸಿ ಕೇಂದ್ರ ಸರಕಾರಕ್ಕೆ ಶಿಫಾರಸ್ಸು ಮಾಡಬೇಕು, ಅದೇ ರೀತಿ, ಕೇಂದ್ರ ಸರಕಾರ ಚಳಿಗಾಲದ ಅಧಿವೇಶನದಲ್ಲಿ ಪರಿಶಿಷ್ಟ ಒಳ ಮೀಸಲಾತಿ ಬಗ್ಗೆ ಉಷಾಮಹ ಸಮಿತಿ (2008) ನೀಡಿರುವ ವರದಿಯಂತೆ ಸಂವಿಧಾನದ ಅನುಚ್ಛೇದ 341ಕ್ಕೆ ತಿದ್ದುಪಡಿ ಮಾಡಿ ಸಂವಿಧಾನದ ಷೆಡ್ಯೂಲ್ಡ್ 9ರಲ್ಲಿ ಸೇ–ರಿಸಬೇಕು ಎಂದು ಒತ್ತಾಯಿಸಿದರು.

ಇನ್ನೂ ಸುಪ್ರೀಂ ಕೋರ್ಟ್‌ನ 7 ನ್ಯಾಯಾಧೀಶರ ಪೀಠದಲ್ಲಿರುವ ವಿವಿಧ ರಾಜ್ಯಗಳ ಒಳ ಮೀಸಲಾತಿ ಪ್ರಕರಣದ ಪರವಾಗಿ ಕೇಂದ್ರ ಸರ್ಕಾರ ಬಲವಾಗಿ ವಾದ ಮಂಡಿಸಿ ಒಳ ಮೀಸಲಾತಿ ವರ್ಗೀಕರಿಸಬೇಕು. ಕಾಂತರಾಜು ಆಯೋಗದ ವರದಿಯನ್ನು ಸದನದಲ್ಲಿ ಚರ್ಚಿಸಿ ಅಂಗೀಕರಿಸಿ ಜನ ಸಂಖ್ಯೆಗನುಗುಣವಾಗಿ ಮೀಸಲಾತಿ ಹಂಚಿಕೆ ಮಾಡಬೇಕು ಎಂದು ಅವರು ಮನವಿ ಮಾಡಿದರು.

## ವ್ಯಕ್ತಿತ್ವ ವಿಕಸನ ಮಾಲೆ.. 27

# ಬಿಟ್ಟು ಬಿಡಿ ಹೋಲಿಕೆ ಬೆಳೆಸಿಕೊಳ್ಳಿ ಸ್ವಂತಿಕೆ

'ಪಕ್ಕದ ಮನೆ ಪದ್ಮ ಕೋಗಿಲೆ ತರ ಹಾಡುತ್ತಾಳೆ. ನೀನೂ ಇದ್ದಿಯಾ. ನಿನ್ನ ಗೆಳೆಯ ರವಿ ನೋಡು ಭಾಷಣ ಸ್ಪರ್ಧೆಯಲ್ಲಿ ರಾಜ್ಯ ಮಟ್ಟದವರೆಗೂ ಬಹುಮಾನ ಪಡೆದಿದ್ದಾನೆ. ಹಾಡು ಭಾಷಣ ಇರದಿದ್ದರೆ ಅಷ್ಟೇ ಹೋಯ್ತು ರಜನಿ ತರಹ ಕ್ಲಾಸಿಗೆ ರ್‍ಯಾಂಕ್ ಬರೋಕೆ ಆಗಲ್ಲ ಯಾವಾಗ ನೋಡಿದರೂ ಮನೆ ಮುಂದೆ, ಮೈದಾನದಲ್ಲಿ ಕ್ರಿಕೆಟ್ ಬ್ಯಾಟ್ ಹಿಡಿದು ಆಡ್ತಿಯಾ ನಾಯಿ ಬಾಲ ಯಾವಾಗಲೂ ಡೊಂಕು ಅದನ್ನು ನೇರ ಮಾಡಲು ಸಾಧ್ಯವಿಲ್ಲ. ನಾ ಹೇಳಿದಾಗ ಮಾತ್ರ ಅಭ್ಯಾಸ ಮಾಡುತ್ತಿಯಾ.' ಇದು ರಾಜುವಿನ ಅಪ್ಪ ಅವ್ವನ ಮಾತುಗಳು.ರಾಜುನಿಗೂ



ಜಯ್ ನುಡಿ

● ಜಯಶ್ರೀ.ಜೆ.ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು, ಬೆಳಗಾವಿ
9449234142

ಹೆತ್ತವರ ಮಾತುಗಳನ್ನು ಕೇಳಿ ಕೇಳಿ ರೋಸಿ ಹೋಗುತ್ತದೆ. ನಾನು ಆಟದಲ್ಲಿ ಮುಂದಿರೋದು ಇವರಿಗೆ ಕಾಣುವುದೇ ಇಲ್ಲ ಎಂದು ಗೊಣಗಿಕೊಳ್ಳುತ್ತಾನೆ. ಮನಸ್ಥಿತಿ ಸರಿ ಇರದಿದ್ದಾಗ ಹೌದಲ್ಲ ನನಗೆ ಚೆನ್ನಾಗಿ ಹಾಡೋಕೆ ಬರಲ್ಲ. ಭಾಷಣ ಮಾಡೋಕೆ ಬರಲ್ಲ. ಅಂಕ ಜಾಸ್ತಿ ಗಳಿಸಲು ಆಗಿಲ್ಲ. ನಾನು ಕೆಲಸಕ್ಕೆ ಬಾರದವನು ಎಂದೆನಿಸುತ್ತದೆ. ಇದು ಕೇವಲ ರಾಜುವಿನ ಆತಂಕದ ಸ್ಥಿತಿಯಲ್ಲ. ನಮ್ಮಲ್ಲಿ ಬಹುತೇಕ ಜನ ಪಾಲಕರ ಮತ್ತು ಮಕ್ಕಳ ಸಮಸ್ಯೆ. ಇತರರೊಂದಿಗಿನ ಹೋಲಿಕೆ ಬಹುತೇಕ ಸಲ ನೋವನ್ನೇ ತರುವುದು.



ಹೋಲಿಕೆಯಿಂದ ಹೊರ ಬರುವುದು ಹೇಗೆ ಎಂಬುದು ಹಲವಾರು ಯುವಕ/ತಿಯರ ಸಮಸ್ಯೆ. ಹೋಲಿಕೆಯ ಕುಣಿಕೆಯಿಂದ ಬಚಾವಾಗಲು ಕೆಲವು ಸುಳಿವುಗಳು

ಒಬ್ಬರಂತೆ ಒಬ್ಬರಿಲ್ಲ

ನಮಗೆಲ್ಲ ಗೊತ್ತಿರುವ ಹಾಗೆ ಶಕ್ತಿಯಲ್ಲಿ ಅಶ್ವ ಶಕ್ತಿ ಪ್ರಸಿದ್ಧವಾದುದು. ಅದಕ್ಕೆ ಮರ ಹತ್ತುವ ಸ್ಪರ್ಧೆಯಿಟ್ಟರೆ ಅದು ನಪಾಸಾಗುತ್ತದೆ. ಮೀನು ಸಲೀಸಾಗಿ ಈಜುವುದು ಅದಕ್ಕೆ ಭೂಮಿಯ ಮೇಲೆ ಓಡುವ ಸ್ಪರ್ಧೆ ಇಟ್ಟರೆ ಸತ್ತೇ ಹೋಗುತ್ತದೆ. ಪಶು ಪ್ರಾಣಿಗಳ ಹಾಗೆಯೇ ನಮ್ಮಲ್ಲಿಯೂ ಪ್ರತಿಯೊಬ್ಬರೂ ಒಂದೊಂದರಲ್ಲಿ ವಿಶೇಷ ಪ್ರತಿಭೆಯನ್ನು ಹೊಂದಿರುತ್ತೇವೆ. ಈಗಾಗಲೇ ಗೆಲುವು ಸಾಧಿಸಿದವರನ್ನು ಕಂಡು ಅವರಂತಾಗಲು ಹೋದರೆ ಅವರಿಗೆ ಹೋಲಿಸಿಕೊಂಡು ಕೀಳರಿಮೆಯಿಂದ ಬಳಲುತ್ತೇವೆ. ನಿಮ್ಮಲ್ಲಿರುವ ಶಕ್ತಿಯನ್ನು ಕಡೆಗಣಿಸುವುದು ದೊಡ್ಡ ತಪ್ಪು. ಜೀವನದ ಕೊನೆಯಲ್ಲಿ ಶಕ್ತಿಯ ಅರಿವಾದರೆ ನಿಷ್ಪ್ರಯೋಜಕ. ಹಾಗೇ ಯಾರನ್ನೂ ಕಡೆಗಣಿಸಬೇಡ. ಕಬೀರರು ಹೇಳಿದಂತೆ,' ಕಾಲ ಕೆಳಗಿರುವ ಕಡ್ಡಿಯನ್ನು ಕಡೆಗಣಿಸಬೇಡ. ಅದೇ ಹಾರಿ ಬಂದು ನಿನ್ನ ಕಣ್ಣಲ್ಲಿ ನೆಟ್ಟು ನೋವನ್ನುಂಟು ಮಾಡಬಹದು.' ಮತ್ತೊಬ್ಬರ ನಕಲು ಮಾಡುವುದು ತರವಲ್ಲ. ಪ್ರತಿಯೊಬ್ಬರಿಗೂ ಪಂಚೇಂದ್ರಿಯಗಳಿವೆ. ಆದರೆ ಅವು ನೋಡಲು ಬೇರೆ ಬೇರೆಯೇ ಆಗಿವೆ. ಅಂದರೆ ಒಬ್ಬರಂತೆ ಒಬ್ಬ–ರಿಲ್ಲ. ಹೀಗಾಗಿ ಪ್ರತಿಯೊಬ್ಬರಲ್ಲಿ ಹುದುಗಿರುವ ಪ್ರತಿಭೆಗಳು ಭಿನ್ನ ಭಿನ್ನ ಎಂಬ ವಿಷಯವನ್ನು ಮನದಟ್ಟು



ಮಾಡಿಕೊಂಡರೆ ಹೋಲಿಕೆಯಾಚೆ ಬರುವುದು ಸುಲಭ.

ಕೊರತೆಯ ಭಯ ಬೇಡ

ಬೇರೆಯವರಲ್ಲಿರುವ ಪ್ರತಿಭೆ ನನ್ನಲ್ಲಿಲ್ಲ. ನನ್ನಲ್ಲಿ ಕೊರತೆಗಳ ಆಗರವೇ ಇದೆ. ಈ ಕೊರತೆಗಳ ಕಾರಣದಿಂದ ನನಗೇನೂ ಸಾಧಿಸಲಾಗುವುದಿಲ್ಲ ಎನ್ನುವ ಭ್ರಮೆಯಿಂದ ಹೊರ ಬನ್ನಿ. ಇತರರ ಜಾಣ್ಮೆ, ಸೌಂದರ್ಯ, ಸಿರಿವಂತಿಕೆಗೆ ಹೋಲಿಸಿಕೊಂಡು ಕೊರಗುವುದನ್ನು ನಿಲ್ಲಿಸಿ. ಇತರರಲ್ಲಿರುವುದು ಶ್ರೇಷ್ಟ. ನನ್ನಲ್ಲಿರುವುದು ಕನಿಷ್ಟ. ಎಂಬ ನಿರ್ಧಾರಕ್ಕೆ ಬರಬೇಡಿ. ನಮ್ಮ ನಮ್ಮ ಮನೋವೃತ್ತಿಯಂತೆ ನಮ್ಮ ಇಚ್ಛೆಗಳಿರುತ್ತವೆ ಎನ್ನುತ್ತಾರೆ ಬಲ್ಲವರು. ಸುತ್ತ ಮುತ್ತ ಇರುವವರ ಅಭಿಪ್ರಾಯವನ್ನು ಮನ್ನಿಸಿ ಅದರಂತೆ ನಡೆಯದೇ ಹೋದರೆ ನನ್ನಲ್ಲಿರುವ ಕೊರತೆಯ ಕಂದಕ ಮುಚ್ಚಲಾಗುವುದಿಲ್ಲ. ಬೇರೆಯವರ ಮಾತಿನಂತೆ ನಡೆದುಕೊಂಡರೆ ಅದು ನಿಸ್ವಾರ್ಥ. ಕೊರತೆಯ ನೀಗಿಸಿಕೊಳ್ಳುವುದರಲ್ಲಿ ತೊಡಗಿಕೊಂಡರೆ ಅದು ಸ್ವಾರ್ಥ ಎಂಬ ತಪ್ಪು ಕಲ್ಪನೆಯಲ್ಲಿ ಕಾಲ ಕಳೆಯಬೇಡಿ. 'ತನ್ನ ಹಿತವನ್ನು ನೋಡಿಕೊಳ್ಳುವುದು ಸ್ವಾರ್ಥವಲ್ಲ. ಇತರರ ಹಿತಕ್ಕೆ ದಕ್ಕೆ ತರುವುದೇ ಸ್ವಾರ್ಥ.' ಎಂಬುದನ್ನು ಅರಿತು ಮುನ್ನಡೆಯಿರಿ.

ಆಸಕ್ತಿ ಗುರುತಿಸಿಕೊಳ್ಳಿ

ವಾತ್ಸಾಯನ ಮುನಿಯ ನುಡಿಯಂತೆ 'ಒಂದೇ ಒಂದು ದೋಷವು ಎಲ್ಲ ಗುಣಗಳನ್ನು ಕೆಡಿಸಿಬಿಡುತ್ತದೆ.' ಹೋಲಿಕೆಯಲ್ಲಿ ಬಿದ್ದು ಬಿಟ್ಟರೆ ನಮ್ಮೆಲ್ಲ ಸಾಮರ್ಥ್ಯ ಸರ್ವ ಶಕ್ತಿ ವಿನಾಶವಾದಂತೆಯೇ ಸರಿ. ನಿಮಗೆ ಯಾವ ರಂಗದಲ್ಲಿ ಆಸಕ್ತಿ ಇದೆ ಎಂಬುದನ್ನು ಗುರುತಿಸಿ. ಬಡತನದ ಕಾರಣದಿಂದ ಶಾಲಾ ಶಿಕ್ಷಣ ಪಡೆಯದ ಬಾಲಕನೊಬ್ಬ ಹೊಟ್ಟೆ ಪಾಡಿಗಾಗಿ ಬುಕ್ ಬೈಂಡಿಂಗ್ ಕೆಲಸ ಮಾಡುತ್ತಿದ್ದ. ಬೈಂಡಿಂಗಿಗೆ ಬಂದ ಪುಸ್ತಕಗಳನ್ನು ಓದುವ ಗೀಳು ಬೆಳೆಸಿಕೊಂಡ. ಬರ ಬರುತ್ತ ವಿಜ್ಞಾನದಲ್ಲಿ ತನಗಿರುವ ಆಸಕ್ತಿಯನ್ನು



ಗುರುತಿಸಿಕೊಂಡು ಸರ್ ಹಂಪ್ರೆ ಡೇವಿಯ ಸಹಾಯಕನಾಗಿ ಕಾರ್ಯ ನಿರ್ವಹಿಸಿ ಕೊನೆಗೆ ಜಗತ್ತಿನ ಸುಪ್ರಸಿದ್ಧ ವಿಜ್ಞಾನಿಯಾದ ಆತನೇ ಮೈಕೆಲ್ ಫಾರಡೆ. ಆಸಕ್ತಿಯನ್ನು ಗುರುತಿಸಿಕೊಳ್ಳಬೇಕೆಂದರೆ ನಿಮ್ಮನ್ನು ನೀವು ಅರ್ಥೈಸಿಕೊಳ್ಳಿ. ಅಂ–ದರೆ ನಿಮ್ಮಲ್ಲಿರುವ ಬಲ ಮತ್ತು ಬಲಹೀನತೆಗಳನ್ನು ತಿಳಿದುಕೊಳ್ಳಿ. ಈ ಕೆಲಸ ನನಗೆ ತುಂಬಾ ಖುಷಿ ನೀಡುತ್ತದೆ. ಇದನ್ನು ನಾನು ಇತರ–ರಿಗಿಂತ ಬಹಳಷ್ಟು ಚೆನ್ನಾಗಿ ಮಾಡಬಲ್ಲೆ. ವಿವಿಧ ವಿಷಯಗಳಲ್ಲಿ ಆಸಕ್ತಿ ಇದೆ ಎಂದೆನಿಸಿದಾಗ ಇದನ್ನು ಮಾಡದಿದ್ದರೆ ಏನೋ ಕಳೆದುಕೊಂಡಂತೆ ಅನಿಸುತ್ತದೆ. ಈ ಕೆಲಸ ನನಗೆ ಪಂಚ ಪ್ರಾಣ. ಇದನ್ನು ಮಾಡದೇ ನಾನಿರಲಾರೆ.ಅಂತ ಹೇಳುತ್ತಿರೋ ಅದೇ ನಿಜವಾಗಲೂ ನಿಮ್ಮ ಆಸಕ್ತಿ ಎಂದು ಪರಿಗಣಿಸಿ ನಿಮ್ಮ ಗುರಿಯನ್ನು ನಿರ್ಣಯಿಸಿ.

ನೀವು ನೀವಾಗಿರಿ

ಬೇರೆಯವರು ನಿಮ್ಮನ್ನು ಇಷ್ಟಪಡಬೇಕೆಂದು ನಿಮಗೆ ಇಷ್ಟವಿಲ್ಲದ, ನಿಮ್ಮ ವ್ಯಕ್ತಿತ್ವಕ್ಕೆ ಹೊಂದದ ಬದಲಾವಣೆಗಳಿಗೆ ಮುಂದಾಗವೇಡಿ. ಭೌತಿಕವಾಗಿ ನಿಮ್ಮನ್ನು ನೀವು ಬದಲಾಯಿಸಿಕೊಳ್ಳಲು ಪ್ರಯತ್ನಿಸಬೇಡಿ. ನಿಮ್ಮ ಕುಟುಂಬದ ಆಚರಣೆಗಳು, ಪದ್ದತಿಗಳು, ಸತ್ಸಂಪ್ರದಾಯಗಳು, ಹಬ್ಬ ಹರಿದಿನಗಳು, ವ್ರತಾಚರಣೆಗಳು ಮೌಢ್ಯತೆಯಿಂದ ಮುಕ್ತವಾಗಿರುವಾಗ ಅವುಗಳನ್ನು ಬದಲಾಯಿಸುವುದರಿಂದ ಅರ್ಥವಿಲ್ಲ. ಸಣಕಲು ದೇಹದವನು ದಪ್ಪದಾಗಿ ಕಾಣಲು ಸ್ವೆಟರ್ ಧ–ರಿಸಿದರೆ ನೀವು ಅದನ್ನು ಫ್ಯಾಷನ್ ಎಂದು ತಿಳಿದು ತಡೆದುಕೊಳ್ಳಲಾರದ ಬೇಸಿಗೆಯ ದಗೆಯಲ್ಲಿ ಅಂಧರಾಗಿ ಅನುಕರಿಸಲು ಹೋದರೆ ನಗೆಪಾಟಲಿಗೆ ಈಡಾಗುತ್ತೀರಿ. ನಿಮ್ಮ ದೇಹಕ್ಕೆ ಕಾಲಮಾನಕ್ಕೆ ಏನು ಸೂಕ್ತವೋ ಅದನ್ನೇ ಧರಿಸಿ. ನಟ ಪುನಿತ್ ರಾಜ್ ಕುಮಾರ ಎಂದರೆ ಅಚ್ಚು ಮೆಚ್ಚು ಆತನ ಬಿಗ್ ಫ್ಯಾನ್ ನಾನು ಎನ್ನುತ್ತ ಆತನ ನಡೆ ನುಡಿಯನ್ನು ಅನುಸರಿಸಿದರೆ ನಿಮ್ಮನ್ನು ಜ್ಯೂನಿಯರ್ ಪುನಿತ್ ಎಂದು ಕರೆಯುತ್ತಾರೆ ಹೊರತು ನಿಮ್ಮನ್ನು ನಿಮ್ಮ ಹೆಸ–ರಿನಲ್ಲಿ ಗುರುತಿಸುವುದಿಲ್ಲ. ಹೀಗಾಗಿ ಎಲ್ಲೆಲ್ಲಿ ಯಾವುದು ಒಳ್ಳೆಯದಿದೆಯೋ ಅದನ್ನು ನಿಮ್ಮದಾಗಿಸಿಕೊಳ್ಳಿ ಆದರೆ ಸಂಪೂರ್ಣವಾಗಿ ನಿಮ್ಮತನವನ್ನು ಬಿಟ್ಟುಕೊಡಬೇಡಿ. ಹಾಗೆ ಮಾಡಲು ಹೋದರೆ ನವಿಲು ಕುಣಿಯುತ್ತೆ



ಅಂತ ಕೆಂಬೂತ ಕುಣಿಯಲು ಹೋದಂತೆ ಆಗುತ್ತದೆ. 'ನಮಗೆ ಜೀವನವನ್ನು ಕೊಟ್ಟ ದೇವರು ಅದರ ಜೊತೆಯಲ್ಲಿಯೇ ಸ್ವಾತಂತ್ರ್ಯವನ್ನೂ ದಯಪಾಲಿಸಿದ್ದಾನೆ.' ಎಂಬುದು ಜೆಫರ್ಸನ್ ಮಾತು. ಸ್ವಾತಂತ್ರ್ಯವಾಗಿ ನೆಮ್ಮದಿಯಿಂದಿರಿ. ಸ್ವ ಸಾಮಥ–ರ್ಯದಿಂದ ಪಡೆಯುವ ಗೌರವವೇ ನಿಜವಾದ ಗೌರವ.

ಅವಮಾನಗಳಿಗೆ ಹೆದರದಿರಿ

ಬಹು ಅಂಗವೈಕಲ್ಯವನ್ನು ಹೊರೆ ಎಂದುಕೊಳ್ಳದೇ ಸಾಧನೆಯ ಪರ್ವತವನ್ನೇರಿದ ಹೆಲೆನ್ ಕೆಲ್ಲರ್, ಕುರುಡನಾದರೂ ಡಾಕ್ಟರ್ ಆದ ಡೇವಿಡ್ ಹಾರ್ಟ್ಮನ್,ಬಡತನವನ್ನು ಬೆನ್ನಿಗಂಟಿಸಿಕೊಂಡು ಹುಟ್ಟಿದ ಅಬ್ರಹಾಂ ಲಿಂಕನ್ ಅಧ್ಯಕ್ಷನಾಗಲು ಪಟ್ಟ ಅವಮಾನಗಳು ಅಷ್ಟಿಷ್ಟಲ್ಲ. ಹೆಜ್ಜೆ ಹೆಜ್ಜೆಗೂ ಅವಮಾನದ ರುಚಿಂ–ಯನ್ನು ಕಂಡವರೆ ಅವರೆಲ್ಲ. ಆದರೂ ತನ್ನಂತೆ ಇರುವವರ ಜೊತೆ ತಮ್ಮನ್ನು ಹೋಲಿಸಿಕೊಂಡು ಅಮೂಲ್ಯ ಜೀವನ ವ್ಯರ್ಥವಾಗಿಸಿಕೊಳ್ಳಲಿಲ್ಲ. ಬದಲಾಗಿ ಅವಮಾನಗಳಿಗೆ ಕೆಚ್ಚೆದೆಯಿಂದ ಸೆಡ್ಡು ಹೊಡೆದು ಗೆದ್ದರು. ಖ್ಯಾತ ಫೋರ್ಡ್ ಮೋಟಾರು ಕಂಪನಿಯ ಮುಖ್ಯಸ್ಥ ಹೆನ್ರಿ ಫೋರ್ಡ್ ಕಾರು ಕಂಡು ಹಿಡಿಯುವ ಕಠಿಣ ಪರಿಶ್ರಮದಲ್ಲಿದ್ದ ಕಾಲದಲ್ಲಿ ಒಬ್ಬ ಹಳ್ಳಿಗ ಆತನನ್ನು ಉದ್ದೇಶಿಸಿ,'ಕುದುರೆಗಳೇ ಇಲ್ಲದ ಚಕ್ರದ ರಥವನ್ನು ಎಳೆಯಬೇಕು ಅಂದುಕೊಂಡಿದ್ದಿಯಾ? ಶ್ರೀಮಂತ ಆಗೋ ಹುಚ್ಚು ಕನಸು ಕಾಣ್ತಿದಿಯಾ?' ಎಂದು ವ್ಯಂಗ್ಯವಾಗಿ ಕೇಳಿದನಂತೆ. ಅದಕ್ಕೆ ಫೋರ್ಡ್ 'ನಾನಷ್ಟೇ ಅಲ್ಲ ಸಾವಿರಾರು ಜನರನ್ನು ಶ್ರೀಮಂತರನ್ನಾಗಿ ಮಾಡಬೇಕು ಅಂತ ಕನಸು ಕಾಣ್ತಿದಿನಿ.' ಅಂತ ಗಟ್ಟಿಯಾದ ಧ್ವನಿಯಲ್ಲಿ ಉತ್ತರಿಸಿದನಲ್ಲದೇ ತಾನು ಅಂದಂತೆ ಸಾಧಿಸಿದ. ಹೋಲಿಕೆಯ ಗೋರಿಯಲ್ಲಿ ಹೂತುಕೊಳ್ಳದೇ ನೈಜತೆಯನ್ನು ಅರ್ಥೈಸಿಕೊಂಡು ನಡೆದರೆ ಚೆಂದದ ಜೀವನವೊಂದು ನಾವು ನಡೆಯುವ ದಾರಿಯಲ್ಲಿ ಮುಗಳ್ನಗುತ್ತದೆ.

# ಅವ್ಯವಸ್ಥೆಯ ಆಗರವಾದ ಪ್ರತಿಭಾ ಕಾರಂಜಿ : ಆಕ್ರೋಶ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ಖಾಸಗಿ ಶಾಲೆಯವರನ್ನು ಆಟಕ್ಕುಂಟು ಲೆಕ್ಕಕ್ಕಿಲ್ಲ ಎಂಬಂತೆ ಬಿಂಬಿಸಿದ ಇಲ್ಲಿನ ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿ ಯು.ಬಿ.ಧ–ರಿಕಾರ ಇವರ ಧೋರಣೆಯನ್ನು ಉಗ್ರವಾಗಿ ಖಂಡಿಸುತ್ತೇನೆ ಎಂದು ಖಾಸಗಿ ಅನುದಾನ ರಹಿತ ಶಾಲೆಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಮಂಜುನಾಥ ಕೊಪ್ಪ ಹೇಳಿದರು.

ತಾಲೂಕಿನ ಬಿದರಕುಂದಿ ಗ್ರಾಮದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ನಡೆದ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದ ವೇದಿಕೆಯ ಮೇಲೆ ನಿಂತು ಮಾಧ್ಯಮದ ಎದುರು ತಮ್ಮ ಆಕ್ರೋಶವನ್ನು ಅವರು ಹೊರಹಾಕಿದರು.

ಸಂಪೂರ್ಣವಾಗಿ ಈ ಕಾರ್ಯಕ್ರಮವೇ ಕಾಟಾಚಾರಕ್ಕಾದಂತಾಗಿದೆ. ಸರಿಯಾದ ಟೆಂಟ್ ವ್ಯವಸ್ಥೆ ಇಲ್ಲದೇ ಮಕ್ಕಳು ಬಿಸಿಲಿನ ತಾಪಕ್ಕೆ ತಲೆ ತಿರುಗಿ ಬಿದ್ದಿದ್ದಾರೆ. ಇಲಾಖೆಗೆ ಸಾಕಷ್ಟು ಅನುದಾನ ಬಂದಿದ್ದರೂ ಅದನ್ನು ಖರ್ಚು ಮಾಡದೇ ಎತ್ತಿ ಹಾಕುವ ಹುನ್ನಾರ ಇಲ್ಲಿನ ಬಿಇಓ ಧರಿಕಾರ ಅವರು ಮಾಡಿದ್ದಾರೆ. ಖಾಸಗಿ ಶಾಲೆಯವರನ್ನು ಹಣಕಾಸಿನ ನೆರವು ಬೇಕಾದಾಗ ಮಾತ್ರ ಕರೆಯುತ್ತಾರೆ. ಆದರೆ ಈ ಕಾರ್ಯಕ್ರಮದಲ್ಲಿ ಖಾಸಗಿ ಶಾಲೆಯವರನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದ್ದಾರೆ. ಈ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಸಂಪೂರ್ಣವಾಗಿ ಕಾಟಾಚಾರಕ್ಕೆ ಮಾಡಿದ್ದಾರೆ. ಮೇಲಾಧಿಕಾರಿಗಳು ಈ ಕಾರ್ಯಕ್ರಮಕ್ಕೆ ನೀಡಲಾದ ಅನುದಾನವನ್ನು ಸ್ಥಗಿತಗೊಳಿಸಬೇಕು ಎಂದೆಲ್ಲ ತಮ್ಮ ಆಕ್ರೋಶವನ್ನು ಅವರು ಹೊರಹಾಕಿದರು.

"ಕಾರ್ಯಕ್ರಮ ಸಂಪೂರ್ಣವಾಗಿ ವಿಫಲವಾಗಿದೆ. ಬೆಳಿಗ್ಗೆ 10ಕ್ಕೆ ಪ್ರಾರಂಭವಾಗಬೇಕಾದ ಕಾರ್ಯಕ್ರಮವನ್ನು ಮ.12ಕ್ಕೆ ಪ್ರಾರಂಭಿಸಿದ್ದಾರೆ. 100 ಜನ ಖಾಸಗಿ ಶಾಲೆಯ ಶಿಕ್ಷಕರಲ್ಲಿ ನಿರ್ಣಾಯಕರಾಗಿ ಕೇವಲ ಬೆರಳೆಣಿಕೆಯಷ್ಟು ಶಿಕ್ಷಕರನ್ನು ನೇಮಿಸಿದ್ದಾರೆ. ಅವರಿಗೆ ನೀಡಬೇಕಾದ ಭತ್ತೆಯನ್ನೂ ನೀಡಿಲ್ಲ. ಕಾರ್ಯಕ್ರಮದ ಪೂರ್ವಭಾವಿ ಸಭೆ ನಡೆಸಿಲ್ಲ. ನಿರ್ಣಾಯಕರಿಗೆ ಯಾವ ವಿಷಯದಲ್ಲಿ ನಿರ್ಣಯ ನೀಡಬೇಕು ಎಂದು ಮಾನದಂಡ ನಿಗದಿಪಡಿಸಿಲ್ಲ. ಎಲ್ಲ ನಿರ್ಣಯಗಳೂ ಕೈ ಬರಹದಲ್ಲೇ ಇದ್ದದ್ದು ಇದೇ ಮೊದಲು. ದೈವಾರಾಧನೆಯ ಅಭಿನಯವನ್ನು ಶಿಕ್ಷಣ ಮಂತ್ರಿಗಳೇ ನಿಷೇಧಿಸಿದ್ದು ಇಲ್ಲಿ ಕಾಂತಾರಾ ಚಿತ್ರದ ಪಂಜುರ್ಲಿ ಛದ್ಮವೇಶ ಧರಿಸಿ ಅಭಿನಯಿಸಲು ಅನುವು ಮಾಡಿದ್ದಾರೆ. ಪ್ರೌಢ ಶಾಲೆಯ ಕಲೋತ್ಸವವನ್ನು ಪ್ರತ್ಯೇಕವಾಗಿ ಮಾಡದೇ, ಇದೇ ಕಾರ್ಯಕ್ರಮದಲ್ಲಿ ಮಾಡಿದ್ದಾರೆ. ಇದರಿಂದ ಎರಡು ಚಟುವಟಿಕೆಗಳಲ್ಲಿ ಪಾಲ್ಗೊಂಡ ಕೆಲವು ಮಕ್ಕಳು ಒಂದು ಚಟುವಟಿಕೆಯಲ್ಲಿ ಅವಕಾಶ ಸಿಗದೇ ವಂಚಿತರಾಗಿದ್ದಾರೆ. ಕಾರ್ಯಕ್ರಮದಲ್ಲಿ ಸಮರ್ಪಕವಾದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇರಲಿಲ್ಲ. ಸಮರ್ಪಕ ಶೌಚಾಲಯಗಳ ವ್ಯವಸ್ಥೆ ಇರಲಿಲ್ಲ. ರಂಗೋಲಿ ಸ್ಪರ್ದೆಯನ್ನು ಕೋಣೆಗಳಲ್ಲಿ ನಡೆಸದೇ ಹೊರಗಡೆ ನೆಲದ ಮೇಲೆ ನಡೆಸಲಾಗಿದೆ ಎಂದೆಲ್ಲ ಮಂಜುನಾಥ ಆರೋಪಿಸಿದರು.

ಇದೇ ವೇಳೆ ಕಾರ್ಯಕ್ರಮದಲ್ಲಿಯೇ ಬಿಇಓ ಧರಿಕಾರರನ್ನ ತೀವ್ರ ತರಾಟೆಗೆ ತೆಗೆದುಕೊಂಡ ಮಂಜುನಾಥ ಅವರು, ಈ ಹಿಂದೆ ನಡೆದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಹಿಂದಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ವಿರುದ್ಧ ಖಾಸಗಿ ಶಾಲೆಯವರನ್ನು ಎತ್ತಿಕಟ್ಟಿದ್ದ ನೀವು ಯಾಕೆ ನಮ್ಮನ್ನು ಕಡೆಗಣಿಸಿದ್ದೀರಿ ಎಂಬ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ ಎಂದು ಕಿಡಿಕಾರಿದರು.



# ವಿಶ್ವ ಏಡ್ಸ್ ದಿನದ ಅಂಗವಾಗಿ ಜಾಥಾ ಕಾರ್ಯಕ್ರಮ

**ಉದಯರಶ್ಮಿ ನ್ಯೂಸ್**




ವಿಜಯಪುರ: 'ವಿಶ್ವ ಏಡ್ಸ್' ದಿನದ ಅಂಗವಾಗಿ ಜಿಲ್ಲಾಡಳಿತ,ಜಿಲ್ಲಾ ಪಂಚಾಯತಿ,ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕ ಜಿಲ್ಲಾಸ್ಪತ್ರೆ, ಸ್ವಯಂ ಸೇವಾ ಸಂಘ ಸಂಸ್ಥೆಗಳು, ಎನ್‌ಎಸ್‌ಎಸ್ ಘಟಕಗಳು, ರೆಡ್ ರಿಬ್ಬನ್ ಕ್ಲಬ್ ಇವರ ಸಂಯುಕ್ತ ಆಶ್ರಯದಲ್ಲಿ ನ.30ರಂದು ಜಾಥಾ, ಮಾನವ ಸರಪಳಿ ನಿರ್ಮಿಸಿ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಮುದಾಯಗಳು ಮುನ್ನಡೆಯಲಿ ಎಂಬ ಈ ವರ್ಷದ ಘೋಷ ವಾಕ್ಯದೊಂದಿಗೆ

ನ.30ರಂದು ಸಂಜೆ 6ಗಂಟೆಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಗಾಂಧಿ ವೃತ್ತದವರೆಗೆ ದೀಪ ನಡಿಗೆ (ಕ್ಯಾಂಡಲ್ ಮಾರ್ಚ್) ಜಾಥಾ ಹಾಗೂ ಗಾಂಧಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಜಾಗೃತಿ ಮೂಡಿಸಲಾಗುವುದು. ಡಿ.1ರಂದು ಬೆಳಿಗ್ಗೆ 8.30ಕ್ಕೆ ಕೇಂದ್ರ ಬಸ್ ನಿಲ್ದಾಣದಿಂದ ಜೋಡ ಗುಮ್ಮಟ,ಮೀನಾಕ್ಷಿ ಚೌಕ,ಗಾಂಧಿ ವೃತ್ತ ಮಾರ್ಗವಾಗಿ ಸಂತ ಅನ್ನಮ್ಮಾ ದೇವಾಲಯ (ಚರ್ಚ್)ವರೆಗೆ ಜಾಥಾ ಹಮ್ಮಿಕೊಳ್ಳಲಾಗಿದೆ. ಸಂತ ಅನ್ನಮ್ಮಾ ದೇವಾಲಯ (ಚರ್ಚ್)ನಲ್ಲಿ ವೇದಿಕೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಈ ಜಾಥಾ ಹಾಗೂ ಕಾರ್ಯಕ್ರಮದಲ್ಲಿ ಭಾಗವಹಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಸಶಸ್ತ್ರ ಪಡೆಗಳ ಧ್ವಜ ನಿಧಿ ಸಂಗ್ರಹದಲ್ಲಿ ವಿಜಯಪುರ ಸಾಧನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ಜಿಲ್ಲೆಯು 2022ನೇ ಸಾಲಿನ ಸಶಸ್ತ್ರ ಪಡೆಗಳ ಧ್ವಜ ನಿಧಿಗೆ ನಿಗದಿಪಡಿಸಲಾಗಿದ್ದ ಗು–ರಿಯನ್ನು ಸಾಧಿಸಿದ ಹಿನ್ನಲೆಯಲ್ಲಿ ಡಿಸೆಂಬರ್ 7 ರಂದು ಬೆಂಗಳೂರಿನ ರಾಜಭವನದ ಗಾಜಿನ ಮನೆಯಲ್ಲಿ ನಡೆಯುವ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆಯಲ್ಲಿ ವಿಜಯಪುರ ಜಿಲ್ಲಾಧಿಕಾರಿಗಳ ಟಿ.ಭೂಬಾಲನ್ ಅವರು ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಗೌರವಾನ್ವಿತ ರಾಜ್ಯಪಾಲ–ರಿಂದ ಪ್ರೊತ್ಸಾಹಕ ಪಾರಿತೋಷಕ ಸ್ವೀಕರಿಸಲಿದ್ದಾರೆ.

ಸಶಸ್ತ್ರ ಪಡೆಗಳ ಧ್ವಜ ನಿಧಿಗೆ ನಿಗದಿಪಡಿಸಲಾದ ಗುರಿ ಸಾಧಿಸಿರುವುದರಿಂದ ಈ ನಿಧಿಯು ಮಾಜಿ ಸೈನಿಕರು ಮತ್ತು ಅವರ ಅವಲಂಬಿತರ ಕಲ್ಯಾಣ ಕಾರ್ಯಕ್ರಮಗಳಿಗೆ ಅಮೂಲ್ಯ ನೆರವು ನೀಡಲಿದ್ದು, ಜಿಲ್ಲೆಯ ಕೊಡುಗೆಯನ್ನು ಪ್ರಶಂಸಿಸುವ ಉದ್ದೇಶದಿಂದ ಪ್ರೋತ್ಸಾಹಕ ಪಾರಿತೋಷಕವನ್ನು ನೀಡಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

# ನ.30 ರಂದು ಕಾರ್ತಿಕ ಕಿರಣ ಮಂಗಲೋತ್ಸವ

ಮುದ್ದೇಬಿಹಾಳ: ಪಟ್ಟಣದ ಹಳೆಯ ಕಾಯಿಪಲ್ಲೆ ಮಾರುಕಟ್ಟೆಯಲ್ಲಿರುವ ಖಾಸ್ಗತೇಶ್ವರ ಮಠದಲ್ಲಿ ನ.30 ರಂದು ಸಂಜೆ 5ಕ್ಕೆ ಕಾರ್ತಿಕ ಕಿರಣ ಕಾರ್ಯಕ್ರಮದ ಮಂಗಲೋತ್ಸವ ಕಾರ್ಯಕ್ರಮ ಜರುಗಲಿದೆ.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಇಂಗಳೇಶ್ವರದ ಚನ್ನಬಸವ ಮಹಾಸ್ವಾಮಿಗಳು ವಹಿಸಲಿದ್ದು, ಇಟಗಿಯ ಭೂಕೈಲಾಸ ಮೇಲ್ಗದ್ದುಗೆಯ ಡಾ.ಗುರುಶಾಂತವೀರ ಶಿವಾಚಾರ್ಯರು, ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ದೇವರು, ಬಾಗೇವಾಡಿಯ ವಿರಕ್ತಮಠದ ಸಿದ್ಧಲಿಂಗ ಮಹಾಸ್ವಾಮಿಗಳು, ತಾಳಿಕೋಟೆ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಸಿದ್ಧಲಿಂಗ ದೇವರು, ಮುದ್ದೇಬಿಹಾಳದ ಖಾಸ್ಗತೇಶ್ವರ ಮಠದ ಸಂಗಯ್ಯ ಸ್ವಾಮಿಗಳು ವಹಿಸಲಿದ್ದು, ಉದ್ಘಾಟಕರಾಗಿ ಶಾಸಕ ಸಿ.ಎಸ್.ನಾಡಗೌಡ ಅಪ್ಪಾಜಿ, ಸಾಧನಾ ಮಹಿಳಾ ಒಕ್ಕೂಟದ ಅಧ್ಯಕ್ಷೆ ಗಿರಿಜಾ ಕಡಿ ಅಧ್ಯಕ್ಷತೆವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿ.ಪಂ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಯಶಸ್ವಿನಿ ಸಾಮಾಜಿಕ ಮಹಿಳಾ ಸೇವಾ ಸಂಘದ ಸಿದ್ದಮ್ಮ ಒಣರೊಟ್ಟಿ ಆಗಮಿಸಲಿದ್ದು, ಅಕ್ಕನ ಬಳಗದ ಗೌರಮ್ಮ ನಿಡಗುಂದಿಮಠ, ಸಾಧನಾ ಮಹಿಳಾ ಒಕ್ಕೂಟದ ಗೌರವಾಧ್ಯಕ್ಷೆ ಬೋರಮ್ಮ ರಾಂಪೂರ ಉಪಸ್ಥಿತ–ರಿರಲಿದ್ದಾರೆ.

ಒಕ್ಕೂಟದ ಕಾರ್ಯದರ್ಶಿ ಶಶಿಕಲಾ ಕೆಂಧೂಳಿ ಪ್ರಸ್ತಾವಿಕವಾಗಿ ಮಾತನಾಡಲಿದ್ದಾರೆ.

# ವಿದ್ಯಾರ್ಥಿವೇತನ–ವಿದ್ಯಾಸಿರಿ–ಯೋಜನೆ: ಆನ್‌ಲೈನ್ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ–ಅರೆ ಅಲೆಮಾರಿ ಪ್ರವರ್ಗ–1 ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ದಿನಾಂಕ : 10–01–2024 ಕೊನೆಯ ದಿನವಾಗಿದ್ದು, ಆನ್‌ಲೈನ್ ವೆಬ್‌ಸೈಟ್ https://ssp.postmatric.karnataka.gov.in ಮೂಲಕ ಅರ್ಹ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಈ ಯೋಜನೆಯಡಿ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆ ಸೇರಿದಂತೆ ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಸಹಾಯವಾಣಿ ದೂ:8050770005, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ದೂ:1902 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ಕಾವ್ಯರಶ್ಮಿ

– ಗುರುದೇವಿ.
("ನಮ್ಮ ಕಥಾ ಅರಮನೆ" ಬರಹಗಾರರು)



### ದೀವಟಿಗೆ

ಕರದಲಿ ಕಂದಿಲು ಹಿಡಿದು
ಕಾದು ಕುಳಿತಿರುವೆ ಗೆಳೆಯ
ನಿನ್ನ ನೆನಪಲ್ಲಿ ಬೆಳಕಿನ ಕಿರಣ
ಪ್ರಜ್ವಲಿಸುತಿದೆ ಬಾನೆತ್ತರದಲಿ

ಬಂದೇ ಬರುವೆ ಒಲವ ಸುರಿವೆ
ಎಂಬ ಉತ್ಕಟ ನಂಬಿಕೆಯೊಳು
ಬಿರುಗಾಳಿಗೂ ಭಯಪಡದೆ
ಪ್ರಕಾಶ ಹರಡಿದೆ ನೋಡಲ್ಲಿ

ತಂದೇ ತರುವೆ ಸಂಪ್ರೀತಿಯ ಸಂದೇಶ
ಅಚಲ ವಿಶ್ವಾಸದಿ ತೋರಿ ವಿನಯ
ಅರೆಗಳಿಗೆಗೂ ವಿಮುಖವಾಗದೆ
ಪ್ರಖರ ಪ್ರಭೆಯ ಬೀರಿದೆ ಬಾ ಇಲ್ಲಿ



ನಿಂದೆ ನಿಲ್ಲುವೆ ಏಕಾಂಗಿ ಬಾಳಿಗೆ
ಬಳುವಳಿಯಾಗಿ ತರುವೆ ದೀಪಧಾರೆಯ
ಕಾರಣ ಅಡಿಗಡಿಗೆ ಹಿಂಜರಿಯದೆ
ಪ್ರಣತಿ ಪ್ರಭುತ್ವ ಸಾರಿದೆ ಒಳಹೊರಗಿಲ್ಲಿ

ಪ್ರಣಯದ ಪಾರುಪತ್ಯಕೆ ಅಡಿಗಡಿಗೆ
ಚಳುವಳಿ ಮಾಡದೆ ತೋರು ಒಲವ
ಕಷ್ಟ ನಷ್ಟವ ಅರಿತು ಆರಿಹೋಗದೆ
ಪ್ರಭಾವ ಪಸರಿಸಿದೆ ಪ್ರಣತಿ ನಲಿವಲಿ

# ಸ್ತ್ರೀ ಸ್ವಾತಂತ್ರ್ಯ ಸ್ವೇಚ್ಛೆಯಾಗುತ್ತಿದೆಯೇ

## ಭಾವರಶ್ಮಿ



– ಶ್ರೀಮತಿ.ಪಂಕಜಾ.ಕೆ. ರಾಮಭಟ್
("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**

ನ ಸ್ತ್ರೀ ಸ್ವಾತಂತ್ರ್ಯ ಮರ್ಹತಿ ಎನ್ನುವ ಉಕ್ತಿಯನ್ನು ಸರಿಯಾಗಿ ಅರ್ಥೈಸಿ ಕೊಳ್ಳದೆ ಹೆಣ್ಣನ್ನು ಕೀಳಾಗಿ ಕಾಣುವವರ ಮುಂದೆ ಇಂದು ಹೆಣ್ಣು ವಿದ್ಯಾವಂತಳಾಗಿ ,ಉದ್ಯೋಗಸ್ಥಳಾಗಿ, ಅರ್ಥಿಕ ಸ್ವಾತಂತ್ರ್ಯವನ್ನು ಪಡೆದು ತಲೆಯೆತ್ತಿ ನಿಂತಿದ್ದಾಳೆ . ಹಿಂದಿನ ಕಾಲದಲ್ಲಿ ಹೆಣ್ಣಿಗೆ ವಿದ್ಯೆ ಇರಲಿಲ್ಲ . .ಆಕೆ ಕೇವಲ ಅಡಿಗೆ ಮನೆಗೆ ಮಕ್ಕಳನ್ನು ಹೊತ್ತು ಹೆತ್ತು ಬೆಳೆಸುವುದಕ್ಕಷ್ಟೆ ಸೀಮಿತವಾಗಿದ್ದಳು .. ಕಾಲ ಬದಲಾದಂತೆ ಹೆಣ್ಣಿನ ಸ್ಥಾನಮಾನ ಏರಿಕೆಯಾಗಿದ್ದು , ಆರ್ಥಿಕ ಸ್ವಾತಂತ್ರ್ಯ ಅವಳಿಗೆ ಧೈರ್ಯವನ್ನು ಕೊಟ್ಟಿದೆ ಆದರೆ ಬದಲಾದ ಈ ಸಂಧರ್ಭ ಹೆಣ್ಣಿನ ಬದುಕನ್ನು ಸುಧಾ–ರಿಸುವಲ್ಲಿ ಯಶಸ್ವಿಯಾಗಿದ್ದರೂ , ಸಮಾನತೆಯನ್ನು ತಂದು ಕೊಡುವುದರಲ್ಲಿ ಹಿಂದೆ ಬಿದ್ದಿದೆ



ಪುರುಷ ಪ್ರಧಾನ ವ್ಯವಸ್ಥೆಯಲ್ಲಿ ಸ್ತ್ರೀ ಸ್ವಾತಂತ್ರ್ಯ ಎನ್ನುವುದು ಅಸ್ತಿತ್ವ ಕಳೆದುಕೊಂಡಿದೆ ಸ್ವಾತಂತ್ರ್ಯದ ಅರ್ಥ ವಿಶಾಲವಾಗಿದೆ . ಹೆಣ್ಣು ಉಡುಗೆ ತೊಡುಗೆಯಲ್ಲಿ ಹಿಂದಿನ ಆಚ–ರಣೆಗಳನ್ನು ಬದಲಿಸಿ ಘೋಷಣೆಗಳನ್ನು ಕೂಗುತ್ತಾ ಬೀದಿಗೆ ಇಳಿಯುವುದು ಸ್ವಾತಂತ್ರವೆಂದು ನಂಬಿದರೆ ಅದು ಮೂರ್ಖತನವಾದೀತು. ಬದುಕಿನ ನಿರ್ಧಾರಗಳನ್ನು ತಾನೇ ಸ್ವತಃ ಮಾಡುವುದು ಸಮಾಜದಲ್ಲಿ ತನ್ನ ವ್ಯಕ್ತಿತ್ವಕ್ಕೆ ಒಂದು ಗೌರವವನ್ನು ಉಳಿಸಿಕೊಂಡು ಬದುಕಿದರೆ ಅದುವೇ ಸ್ವಾತಂತ್ರ್ಯ ಎನ್ನುವ ಪರಿಕಲ್ಪನೆಯನ್ನು ಹೆಣ್ಣು ಬೆಳೆಸಿಕೊಳ್ಳಬೇಕು ನಮ್ಮೊಳಗಿನ ಸಾಮರ್ಥ್ಯವನ್ನು ಗುರುತಿಸಿ ಅದನ್ನು ಸಾಧನೆಯನ್ನಾಗಿ ಪರಿವರ್ತಿಸುವುದೇ ನಿಜವಾದ ಸ್ವಾತಂತ್ರ್ಯ . ಸ್ವಾತಂತ್ರ್ಯ ಎಂದಿಗೂ ಸ್ವೇಚ್ಛೆಯಾಗಬಾರದು .

ಇಂದು ಹೆಣ್ಣು ಸ್ವತಂತ್ರಳಾಗಿದ್ದಾಳೆ .ಅವಳ ಕಾರ್ಯಕ್ಷೇತ್ರ ವಿಸ್ತಾರವಾಗಿದೆ .ಆದರೆ ಸ್ತ್ರೀಸ್ವಾತಂತ್ರ್ಯ ಸ್ವೇಚ್ಚಾಚಾರವಾಗುತ್ತಿದೆಯೇ ಎನ್ನುವ ಸಂಶಯ ಬರುವುದು ಸಹಜ ಅದಕ್ಕೆ. ಕಾರಣ ತಮಗೆ ಸಿಕ್ಕಿದ ಸ್ವಾತಂತ್ರ್ಯವನ್ನು ಹೆಣ್ಣು ದುರುಪಯೋಗ ಪಡಿಸುತ್ತಿರುವುದು . ಇಂದಿನ ಹೆಣ್ಣು ಮಕ್ಕಳು ಸ್ವಾತಂತ್ರ್ಯದ ಹೆಸರಿನಲ್ಲಿ ಸ್ವೇಚ್ಛಾಚಾರಕ್ಕಿಳಿದಿದ್ದು ಗಂಡಿನಂತೆ ಸಿಗರೇಟ್ ಕುಡಿತ ಇತ್ಯಾದಿ , ದುರಾಭ್ಯಾಸಗಳನ್ನು ಬೆಳೆಸಿಕೊಂಡು ಸರಿ ರಾತ್ರಿಯವರೆಗೂ ಬಾರ್ ಗಳಲ್ಲಿ ಕ್ಲಬ್ ಗಳಲ್ಲಿ ಗಂಡಿನ ಸಮಕ್ಕೆ ಕುಣಿಯುವುದು ಕಂಡು ಬರುತ್ತಿದೆ.

ತಾವು ಸ್ವತಂತ್ರರೆಂದು ತಮ್ಮ ಬೆನ್ನನ್ನೇ ತಟ್ಟಿಕೊಳ್ಳುವ ಇಂಥ–'ವರು ಸ್ವಾತಂತ್ರ್ಯದ ನಿಜವಾದ ಅರ್ಥವನ್ನು ತಿಳಿದಿಲ್ಲ ಇವರ ಸ್ವೇಚ್ಛಾಚಾರದ ವರ್ತನೆಯಿಂದ ಸ್ವಾತಂತ್ರ್ಯದ ಬೆಲೆ ಕಡಿಮೆಯಾಗುತ್ತಿದೆ . ಪುರುಷರೊಂದಿಗೆ ಸಮಾನತೆಯ ಹೋರಾಟದಲ್ಲಿ ಮಹಿಳಾ ಸಂಘಟನೆಗಳು ಸ್ವೇಚ್ಛಾಚಾರವನ್ನೇ ಸ್ವಾತಂತ್ರವೆಂದು ಬಿಂಬಿಸಿ ಸಮಾಜದ ದಾರಿ ತಪ್ಪಿಸುತ್ತಿವೆ . ಇವರಿಗೆ ಅತ್ಯಾಚಾರಕ್ಕೆ ಒಳಗಾದ ಹೆಣ್ಣು ಮಕ್ಕಳ ಕೂಗು ಕೇಳಿಸದಂತಾಗಿದೆ . ತಮ್ಮ ಹೆಸರಿನ ಹಿಂದೆ ಗಂಡ ಅಥವಾ ತಂದೆಯ ಹೆಸರು ಯಾಕಿರಬೇಕು ಎನ್ನುವ ಕ್ಷುಲ್ಲಕ ವಿಷಯವೇ ಅವರಿಗೆ ದೊಡ್ಡ ದಾಗಿ ಕಾಣುತ್ತಿದೆ .

ತಂತ್ರಜ್ಞಾನ ಮುಂದುವರೆದರೂ ಹೆಣ್ಣಿನ ಸ್ಥಿತಿ ಬದಲಾಗಿಲ್ಲ . ಅತ್ಯಾಚಾರ ಕೌಟುಂಬಿಕ ಹಿಂಸೆ , ವರದಕ್ಷಿಣೆ ಕಿರುಕುಳ ,ಅಲ್ಲದೆ ಮಾನಸಿಕವಾಗಿಯೂ ಆವಳನ್ನು ತುಳಿಯಲಾಗುತ್ತಿದೆ



ಹೆಣ್ಣನ್ನು ದೇವರಂತೆ ಪೂಜಿಸುತ್ತಿದ್ದ ನಾಡಿನಲ್ಲಿ ಇಂದು ಅತ್ಯಾಚಾರದಂತ ಹೇಯ.ಕೃತ್ಯದಿಂದ ಹೆಣ್ಣು ನರಳುವಂತಾಗಿರುವುದು ವಿಪರ್ಯಾಸವೇ ಸರಿ . ಇದಕ್ಕೆಲ್ಲ ಸ್ವಲ್ಪ ಮಟ್ಟಿಗೆ ಹೆಣ್ಣಿನ ಸ್ವೇಚ್ಛಾಚಾರವೇ ಕಾರಣ ಎನ್ನಬಹುದು ಅರೆಬರೆ ಉಡುಗೆ ತೊಡುವುದು ಸ್ವಾತಂತ್ರ್ಯದ ಹೆಸರಿನಲ್ಲಿ ಅಪರಾತ್ರಿ ಕ್ಲಬ್ ಬಾರ್ ಗಳಲ್ಲಿ ಕುಡಿದು ಬೀಳುವುದು .ಗಂಡಸಿಗೆ ಸರಿ ಸಮಾನವಾಗಿ ಎಲ್ಲೆಂದರಲ್ಲಿ ತಿರುಗಾಡುವುದು .ಇತ್ಯಾದಿಗಳಿಂದಾಗಿ ಹೆಣ್ಣಿನ ಮೇಲಿನ ಗೌರವ ಕಡಿಮೆಯಾಗುತ್ತಿರುವುದು ಸುಳ್ಳಲ್ಲ.

ಭಾರತೀಯ ಸನಾತನ ಸಂಸ್ಕೃತಿಯಲ್ಲಿ ಹೆಣ್ಣಿಗೆ ಒಂದು ಉನ್ನತ ಹಾಗೂ ಗೌರವಯುತ ವಿಶೇಷ ಸ್ಥಾನವಿದೆ .ಮಮತೆ ಕರುಣೆ ವಾತ್ಸಲ್ಯ ತಾಳ್ಮೆ ಇವೆಲ್ಲಾ ಹೆಣ್ಣಿಗೆ ದೈವದತ್ತವಾಗಿ ಬಂದ ಆಭರಣಗಳು .ದೇಶ ಸಮಾಜ ಆರೋಗ್ಯಕರವಾಗಿ ಮುನ್ನಡೆದು ಉನ್ನತಿ ಹೊಂದಲು ಉತ್ತಮ ಸ್ತ್ರೀಯರ ಪಾತ್ರ ಅತ್ಯಗತ್ಯ .ಪಾಶ್ಚಾತ್ಯರನ್ನು ಅನುಕರಣೆ ಮಾಡುತ್ತಾ ತಾನು ಸ್ವತಂತ್ರಳಾಗಿದ್ದೇನೆ ಎನ್ನುವ ಕಲ್ಪನೆಯಲ್ಲಿ ತಮ್ಮನ್ನು ತಾವೇ ಅಧೋಗತಿಗಿಳಿಸಿಕೊಳ್ಳುತ್ತಿರುವ ಇಂದಿನ ಸ್ತ್ರೀ , ಸ್ವಾತಂತ್ರ್ಯದ ಅರ್ಥವನ್ನು ಮೊದಲು ತಿಳಿದು ಕೊಳ್ಳಬೇಕಾಗಿರುವುದು ಅತ್ಯಗತ್ಯ.

ಸ್ತ್ರೀ ದೈಹಿಕವಾಗಿಯೂ ಮಾನಸಿಕವಾಗಿಯೂ ,ಪುರುಷ–ರಿಗಿಂತ ಬಿನ್ನಳಾಗಿದ್ದಾಳೆ ನ ಸ್ತ್ರೀ ಸ್ವಾತಂತ್ರ್ಯ ಮರ್ಹತಿ ಎನ್ನುವುದರ ಅರ್ಥ ಬೇರೆಯೇ ಇದೆ ದೈಹಿಕವಾಗಿ ದುರ್ಬಲಳಾದ ಹೆಣ್ಣನ್ನು ಅವಮಾನ ಕಿರುಕುಳ ಅತ್ಯಾಚಾರಗಳಿಂದ ರಕ್ಷಿಸುವುದೇ ಇದರ ವ್ಯಾಖ್ಯೆಯಾಗಿದೆಯೇ ಹೊರತು ಹೆಣ್ಣನ್ನು ದಾಸಿಯಂತೆ ಕಾಣಬೇಕೆಂಬುದಲ್ಲ .

ನಾರಿಯರು ಎಲ್ಲಿ ಗೌರವಿಸಲ್ಪಡುತ್ತಾರೋ ಅಲ್ಲಿ ದೇವತೆಯರು ನೆಲೆ ನಿಲ್ಲುತ್ತಾರೆ ಎಂದು ಮನು ಹೇಳಿರುವುದು ಆತನಿಗೆ ಸ್ತ್ರೀಯರ ಬಗ್ಗೆ ಇರುವ ಉನ್ನತ ಭಾವನೆಯನ್ನು ತೋರಿಸುತ್ತದೆ . ಹೆಣ್ಣು ಮನೆಯ ಕಣ್ಣಾಗಿದ್ದು ವಂಶಾಭಿವೃದ್ಧಿ ಮಾಡಿ ನಿರಂತರ ಮನೆಯ ಬೆಳಕಿನಂತೆ ಶೋಭಿಸುತ್ತಾಳೆ . ಅಂತಹ ಸ್ತ್ರೀ ಸ್ವಾತಂತ್ರ್ಯದ ಹೆಸರಿನಲ್ಲಿ ತನ್ನತನವನ್ನು ಕಳೆದುಕೊಂಡು ಬೀದಿಗೆ ಇಳಿದಿರುವುದು ನಮ್ಮ ಭಾರತದ ಸಂಸ್ಕೃತಿಗೆ ಅವಮಾನ ಮಾಡಿದಂತೆ .

ನಿಜವಾದ ಸ್ವಾತಂತ್ರ್ಯವೆಂದರೆ ಹೆಣ್ಣು ಶಿಕ್ಷಿತಳಾಗುವುದು ,. ವಿವಾಹಾದಿ ವಿಷಯಗಳಲ್ಲಿ ತನ್ನ ಅಭಿಪ್ರಾಯವನ್ನು ವ್ಯಕ್ತ ಪಡಿಸುವ ಸಲಹೆ ಕೊಡುವ ಕೊಳ್ಳುವ ಮುಕ್ತ ವಾತಾವರಣ, ಅಭಿವ್ಯಕ್ತಿ ಸ್ವಾತಂತ್ರ್ಯ ದೌರ್ಜನ್ಯಗಳ ವಿರುದ್ಧ ಧ್ವನಿಯೆತ್ತುವುದು ಇತ್ಯಾದಿಗಳೇ. ನಿಜವಾಗಿ ಹೆಣ್ಣಿಗೆ ಇರಬೇಕಾದ ಸ್ವಾತಂತ್ರ್ಯವಾಗಿದೆ ಆದರೆ ಇಂದಿನ ಆಧುನಿಕ ಮಹಿಳೆಯರು ಅಶಾಂತಿ ಅಜಾಗರುಕತೆಯಿಂದ ಸಮಾಜದ ಶಿಸ್ತು ಕಟ್ಟುಪಾಡುಗಳನ್ನು ಸಡಿಲಗೊಳಿಸಿ , ಸ್ತ್ರೀ ಸಮಾನತೆ ಹೆಸರಿನಲ್ಲಿ ಸ್ವೇಚ್ಛಾಚಾರಿಗಳಾಗಿ ತಾನು ಗಂಡಿಗಿಂತ ಯಾವುದರಲ್ಲೂ ಕಡಿಮೆಯಿಲ್ಲ ಎನ್ನುವಂತೆ ವರ್ತಿಸಿ ,ಎಗ್ಗಿಲ್ಲದಂತೆ ನಡೆದು ಪ್ರಶ್ನಿಸಿದವರ ವಿರುದ್ಧ ಕೇಸ್ ಹಾಕುತ್ತಾ ಸಮಾಜದ ಸ್ವಾಸ್ಥ್ಯವನ್ನು ಕದಡುತ್ತಿದ್ದಾರೆ. ಕಾನೂನಿನ ದುರುಪಯೋಗ ಮಾಡಿಕೊಂಡು ಗುಂಡಾ ಪ್ರಕೃತಿಯನ್ನು ಮೆರೆಯುತ್ತಿದ್ದಾರೆ .ಇಂದು



ಮದುವೆಯಾಗಿ ನಾಳೆ ಡೈವೋರ್ಸ್ ಎಂಬಂತಾಗಿದೆ . ತಾಳ್ಮೆ ಸಂಯಮ ಇತ್ಯಾದಿ ಹೆಣ್ಣಿನ ಸಹಜ ಗುಣಗಳನ್ನು ಗಾಳಿಗೆ ತೂರಿದ್ದಾರೆ. ಅಹಂ ದರ್ಪ ದೌಲತ್ತನ್ನು ತೋರಿಸುತ್ತಾ ಬಾರುಗಳಲ್ಲಿ ಕುಡಿದು ಕುಪ್ಪಳಿಸುತ್ತಾ ಅದುವೇ ಸ್ವಾತಂತ್ರ್ಯ ಎನ್ನುವ ತಪ್ಪು ಕಲ್ಪನೆಯನ್ನು ಬೆಳೆಸಿಕೊಂಡಿದ್ದಾರೆ.

ತುಂಡು ಉಡುಗೆಯುಟ್ಟು ಎಲ್ಲೆಂದರಲ್ಲಿ ತಿರುಗಾಡುವುದು ಸರಿಯಲ್ಲ ಕಾಮುಕರ ಪುಂಡರ ದೃಷ್ಟಿಗೆ ಬಿದ್ದು ಆಕೆಯ ಬದುಕು ಮೂರಾಬಟ್ಟೆಯಾದೀತು ಎನ್ನುವ ಸಾಮಾನ್ಯ ಜ್ಞಾನವೂ ಇಲ್ಲದಂತೆ ವರ್ತಿಸುವುದು ಎಷ್ಟು ಮಾತ್ರಕ್ಕೂ ಸರಿಯಲ್ಲ ಸ್ತ್ರೀ ಸ್ವಾತಂತ್ರ್ಯ ಸ್ವೇಚ್ಛಾಚಾರವಾಗದೆ ಮಹಿಳೆಯರ ಹೆಣ್ಣು ಮಕ್ಕಳ ಪುರೋಭಿವೃದ್ಧಿಗೆ ಬಳಕೆಯಾದರೆ ದೇಶ ಅಭಿವೃದ್ಧಿಯಾದೀತು.